ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SP NEWS ಡಿಜಿಟಲ್ ನ್ಯೂಸ್ ಕಹಾನಿ

SURYA PRAGATHI Kannada daily

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:98 Date:01-05-2026 Friday RNI NO : KARKAN/2021/80805 L2/RNP-1285/TMR/2025-27 Page :4 Price: 1.00

ಸಂಪುಟ: 05 ಸಂಚಿಕೆ: 98 ಪುಟ : 4 ಬೆಲೆ: 1.00 ರೂ

## ರಾಜ್ಯದ ವಿವಿದೆಡೆ ಮಳೆಅಬ್ಬರ ಅಧಿಕಾರಿಗಳಿಗೆ ಸಿಎಂ ಖಡಕ್ ಸೂಚನೆ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರಿನಲ್ಲಿ ಮಳೆಯಿಂದ ಸರಣಿ ಅವಾಂತರಗಳು ಹೆಚ್ಚಾಗದಂತೆ ರಾಜ್ಯ ಸರ್ಕಾರ ಫುಲ್ ಅಲರ್ಟ್ ಆಗಿದೆ. ಆ ನಿಟ್ಟಿನಲ್ಲಿ ಇಂದು ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಧಿಕಾರಿಗಳೊಂದಿಗೆ ಮಹತ್ವದ ಸಭೆ ಮಾಡಲಾಗಿದೆ. ಈ ವೇಳೆ ಸಿಎಂ ಸಿದ್ದರಾಮಯ್ಯ ಖಡಕ್ ಸೂಚನೆಗಳನ್ನು ನೀಡಿದ್ದಾರೆ.

ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿದು ಏಳು ಜನರ ಸಾವಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಾರ್ಯಪಾಲಕ ಇಂಜಿನಿಯರ್ ಅಮಾನತುಗೊಳಿಸಿ, ನೋಟಿಸ್ ಜಾರಿ ಮಾಡುವಂತೆ ಸಿಎಂ ಸಿದ್ದರಾಮಯ್ಯ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಸುರಿದ ಭಾರಿ ಮಳೆಯಿಂದಾಗಿ ಬೌರಿಂಗ್ ಆಸ್ಪತ್ರೆಯ ಗೋಡೆ ಕುಸಿದು, ಏಳು ಮಂದಿ ಸಾವನ್ನಪ್ಪಿದ ಹಿನ್ನೆಲೆ ಇಂದು ವಿಧಾನಸೌಧದ ಸಿಎಂ ಕೊಠಡಿಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಆಯುಕ್ತರೊಂದಿಗೆ ಸಿಎಂ ಸಿದ್ದರಾಮಯ್ಯ ಸಭೆ ಮಾಡಿದರು. ಗೋಡೆಗೆ ಹಾನಿ ಆಗಲಿದೆ ಎಂದು ತಿಳಿದಿದ್ದರೂ ಕಾಮಗಾರಿ ನಡೆಯುವಾಗ ಮಣ್ಣು ಸುರಿದದ್ದು ಏಕೆ ಎಂದು ಸಭೆಯಲ್ಲಿ ಬೌರಿಂಗ್ ಆಸ್ಪತ್ರೆ ಮುಖ್ಯಸ್ಥರನ್ನು ಸಿಎಂ ತರಾಟೆಗೆ ತೆಗೆದುಕೊಂಡರು. ಕೂಡಲೇ ಸಂಬಂಧಪಟ್ಟ ಇಇ ಅಮಾನತುಗೊಳಿಸುವಂತೆ ತಿಳಿಸಿದರು.

**ಸಿಎಂ ಸಿದ್ದರಾಮಯ್ಯ ಟ್ವೀಟ್**

ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿದು ಏಳು ಜನರ ಸಾವಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಕಾರ್ಯಪಾಲಕ



ಇಂಜಿನಿಯರ್ ಅವರನ್ನು ಅಮಾನತುಗೊಳಿಸಿ, ನೋಟೀಸ್ ಜಾರಿ ಮಾಡಬೇಕು.

ಗೋಡೆಗೆ ಹಾನಿಯಾಗುವಂತೆ ಮಣ್ಣು ಸುರಿದದ್ದನ್ನು ಆಸ್ಪತ್ರೆ ಮುಖ್ಯಸ್ಥರು ಏಕೆ ಗಮನಿಸಿಲ್ಲ. ಇದು ಮೇಲ್ನೋಟಕ್ಕೆ ಕರ್ತವ್ಯಲೋಪದಂತೆ ಕಾಣುತ್ತಿದ್ದು, ಕೇವಲ ಒಂದು ಗಂಟೆಯ ಮಳೆಗೆ ನಗರದಲ್ಲಿ 250ಕ್ಕೂ ಹೆಚ್ಚು ಮರಗಳು ಉರುಳಿಬಿದ್ದಿರುವ ಮತ್ತು ರಸ್ತೆಗಳು ಜಲಾವೃತವಾಗಿರುವ ಬಗ್ಗೆ ಅಧಿಕಾರಿಗಳ ವಿರುದ್ಧ ಗರಂ ಆದ ಸಿಎಂ ಸಿದ್ದರಾಮಯ್ಯ, 90 ಮಿ.ಮೀ. ಮಳೆಯಾದರೂ ಯಾಕೆ ಸೂಕ್ತ ಕ್ರಮಕೈಗೊಂಡಿಲ್ಲ ಎಂದು ಪ್ರಶ್ನಿಸಿದರು.

**ಮುಂಗಾರು ಮಳೆ ಆರಂಭಕ್ಕೂ ಮೊದಲೇ ಅಗತ್ಯ ಸಿದ್ಧತೆಗೆ ಸಿಎಂ ಸೂಚನೆ**

ನಗರದ ಮೂಲಸೌಕರ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ ಸಿಎಂ, ಮುಂಗಾರು ಮಳೆ ಪ್ರಾರಂಭವಾಗುವ ಮೊದಲೇ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಬೆಂಗಳೂರಿನ ಐದೂ ವಲಯಗಳ ಆಯುಕ್ತರು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ರಸ್ತೆ ಗುಂಡಿಗಳನ್ನು ತುರ್ತಾಗಿ ಮುಚ್ಚಬೇಕು, ರಾಜಕಾಲುವೆಗಳಲ್ಲಿನ ಹೂಳನ್ನು ತೆರವುಗೊಳಿಸಬೇಕು ಮತ್ತು ಅಂಡರ್ ಪಾಸ್‌ಗಳಲ್ಲಿ ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದರು. ಒಂದು ವೇಳೆ ಅಂಡರ್ ಪಾಸ್‌ಗಳಲ್ಲಿ ನೀರು ತುಂಬಿದರೆ ಪಂಪ್ ಸೆಟ್ ಬಳಸಿ ಕೂಡಲೇ ನೀರು ಹೊರಹಾಕಲು ವ್ಯವಸ್ಥೆ ಮಾಡಬೇಕು ಹಾಗೂ ಅಗತ್ಯಬಿದ್ದರೆ ಅಂಡರ್ ಪಾಸ್ ಮುಚ್ಚುವಂತೆಯೂ ನಿರ್ದೇಶನ ನೀಡಿದ್ದಾರೆ.

ಇನ್ನು ಮುಂಜಾಗ್ರತಾ ಕ್ರಮವಾಗಿ, ನಗರದಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಮತ್ತು ಖಾಸಗಿ ಕಟ್ಟಡಗಳ ಬಗ್ಗೆ ಸಮಗ್ರ ವರದಿ ಸಿದ್ಧಪಡಿಸುವಂತೆ ಸೂಚಿಸಿದ ಸಿದ್ದರಾಮಯ್ಯ, ಅಪಾಯಕಾರಿ ಸ್ಥಿತಿಯಲ್ಲಿರುವ ಖಾಸಗಿ ಕಾಂಪೌಂಡ್ ಹಾಗೂ ಕಟ್ಟಡಗಳ ಮಾಲೀಕರಿಗೆ ಕೂಡಲೇ ನೋಟಿಸ್ ಜಾರಿ ಮಾಡಲು ತಿಳಿಸಿದರು. ಅಲ್ಲದೆ, ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ, ಅಪಾಯದ ಸ್ಥಿತಿಯಲ್ಲಿರುವ ವಿದ್ಯುತ್ ಕಂಬಗಳು ಮತ್ತು ಒಣಗಿದ ಮರಗಳ ರೆಂಬೆಗಳನ್ನು ಆಡಿಟ್ ಮಾಡಿ ಕೂಡಲೇ ತೆರವುಗೊಳಿಸುವಂತೆ ಜಿಬಿಎ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

**SP NEWS ಸಣ್ ಸುದ್ದಿ**

### ಬುದ್ಧ ಪೂರ್ಣಿಮಾ : ಮಾಂಸ ಮಾರಾಟ ನಿಷೇಧ

ತುಮಕೂರು: ಬುದ್ಧ ಪೂರ್ಣಿಮಾ ಪ್ರಯುಕ್ತ ಮೇ 1ರ ಮಧ್ಯರಾತ್ರಿ 12 ಗಂಟೆಯವರೆಗೆ ತುಮಕೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮಾಂಸ ಮಾರಾಟ ನಿಷೇಧಿತ ದಿನವೆಂದು ಘೋಷಿಸಲಾಗಿದೆ. ಈ ಅವಧಿಯಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿ ಕಸಾಯಿಖಾನೆ ಮುಚ್ಚಲು ಹಾಗೂ ಮಾಂಸ ಮಾರಾಟ/ಸಂಗ್ರಹ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ಸಹಾಯಕ ಕಾರ್ಯಪಾಲಕ ಅಭಿಯಂತರರು(ಪರಿಸರ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ರಾಜ್ಯ ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಿಕಾರಿಪುರದ ಶಾಸಕ ಬಿ.ವೈ.ವಿಜಯೇಂದ್ರ ಅವರು ತುಮಕೂರು ನಗರ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್ ಅವರ ನೂತನ ಗೃಹ ಪ್ರವೇಶಕ್ಕೆ ಆಗಮಿಸಿದಾಗ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಸಂಸದ ಜಿ.ಎಸ್.ಬಸವರಾಜು, ಶಾಸಕ ಜಿ.ಬಿ.ಜ್ಯೋತಿಗಣೇಶ್, ಕರುನಾಡ ವಿಜಯಸೇನೆ ರಾಜ್ಯಾಧ್ಯಕ್ಷ ಎಚ್.ಎನ್.ದೀಪಕ್, ಯತೀಶಾರಾಧ್ಯ, ಜಿಲ್ಲಾ ಯುವ ಘಟಕದ ಅಧ್ಯಕ್ಷ ನವಚೇತನ್, ರಕ್ಷಿತ್ ಮುಂತಾದವರಿದ್ದರು.

### ಲಿಡ್ಕರ್ ನಿಗಮದಿಂದ ರಿಯಾಯತಿ ಮಾರಾಟ

ತುಮಕೂರು:ಡಾ: ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ತುಮಕೂರು ಮಾರಾಟ ಮಳಿಗೆಯಲ್ಲಿ ಕಾರ್ಮಿಕರ ದಿನಾಚರಣೆ ಹಾಗೂ ಬಕ್ರೀದ್ ಹಬ್ಬದ ಪ್ರಯುಕ್ತ ಮೇ 31ರವರೆಗೆ ವಿವಿಧ ದಾಸ್ತಾನುಗಳನ್ನು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುವುದು. ಚರ್ಮದ ಶೂ, ಚಪ್ಪಲಿ, ಚರ್ಮದ ವ್ಯಾನಿಟಿ ಬ್ಯಾಗ್, ಪರ್ಸ್, ಲೆದರ್ ಬೆಲ್ಟ್ ಮತ್ತು ಇತರೇ ದಾಸ್ತಾನುಗಳ ಮೇಲೆ ಶೇ.15ರ ರಿಯಾಯಿತಿಯಂತೆ ಮಾರಾಟ ಮಾಡಲಾಗುವುದು.

ಸಾರ್ವಜನಿಕರು ಹೆಚ್ಚಿನ ರೀತಿಯಲ್ಲಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತುಮಕೂರು ಮಾರಾಟ ಮಳಿಗೆಯ ಮತ್ತು ನಿಗಮದ ವ್ಯವಸ್ಥಾಪಕ ಮಂಜುನಾಥ್ ತಿಳಿಸಿದ್ದಾರೆ.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

## ಮಳೆಹಾನಿ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಭೇಟಿ; ಸಂತ್ರಸ್ತರಿಗೆ ಸಾಂತ್ವನ, ಪರಿಹಾರಕ್ಕೆ ಸೂಚನೆ



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಇತ್ತೀಚಿನ ಭಾರಿ ಮಳೆ ಹಾಗೂ ಬಿರುಗಾಳಿಯಿಂದ ಹಾನಿಗೊಳಗಾದ ವಿವಿಧ ಪ್ರದೇಶಗಳಿಗೆ ಗುರುವಾರ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು. ಪ್ರಕೃತಿ ವಿಕೋಪದಿಂದ ಮಾನವ ಜೀವಹಾನಿ, ಬೆಳೆ ನಷ್ಟ ಹಾಗೂ ಮೂಲಸೌಕರ್ಯ ಹಾನಿಯ ಕುರಿತು ಸಮಗ್ರ ಮಾಹಿತಿ ಪಡೆದು ಸಂಬಂಧಪಟ್ಟ ಅಧಿಕಾರಿಗಳಿಗೆ ತಕ್ಷಣದ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಚಿಕ್ಕನಾಯಕನಹಳ್ಳಿ ಪಟ್ಟಣದ ನಿವಾಸಿ ಪುಟ್ಟಯ್ಯ (70 ವರ್ಷ) ಅವರು ಏಪ್ರಿಲ್ 28ರಂದು ಸಂಜೆ ತೋಟದಿಂದ ಮನೆಗೆ ತೆರಳುವ ವೇಳೆ ಆಕಸ್ಮಿಕ ಗಾಳಿ–ಮಳೆಯ ಪರಿಣಾಮ ಮರದ ಕೊಂಬೆ ತಲೆಯ ಮೇಲೆ ಬಿದ್ದು ಮೃತಪಟ್ಟ ಘಟನೆ ಹಿನ್ನೆಲೆ, ಜಿಲ್ಲಾಧಿಕಾರಿಗಳು ಮೃತರ ನಿವಾಸಕ್ಕೆ ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಂತಾಪ ಸೂಚಿಸಿ ಸಾಂತ್ವನ ಹೇಳಿದರು.

ಈ ವೇಳೆ ತಹಶೀಲ್ದಾರ್, ಮುಖ್ಯಾಧಿಕಾರಿ ಹಾಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಮೃತರ ಕುಟುಂಬಕ್ಕೆ ತಕ್ಷಣ ಮರಣ ಪ್ರಮಾಣ ಪತ್ರ ವಿತರಿಸುವುದು, ಹಕ್ಕುಪತ್ರ ಸಂಬಂಧಿತ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವುದು ಹಾಗೂ ಅರ್ಹ ಪಿಂಚಣಿ ಸೇರಿದಂತೆ ಸರ್ಕಾರದ ಸೌಲಭ್ಯಗಳನ್ನು ವಿಳಂಬವಿಲ್ಲದೆ ಮಂಜೂರು ಮಾಡುವಂತೆ ನಿರ್ದೇಶನ ನೀಡಿದರು.

ಸರ್ಕಾರದಿಂದ ಲಭ್ಯವಿರುವ ಪರಿಹಾರ ಧನ ಮತ್ತು ಅಗತ್ಯ ನೆರವುಗಳನ್ನು ಶೀಘ್ರ ಕುಟುಂಬಕ್ಕೆ ತಲುಪಿಸಲು ಕ್ರಮವಹಿಸುವಂತೆ ಸೂಚಿಸಿದರು.

ತಿಪಟೂರು ತಾಲ್ಲೂಕಿನ ಹಟ್ನ ಗ್ರಾಮದ ಸರ್ವೆ ನಂ. 97 ಪ್ರದೇಶಕ್ಕೆ ಭೇಟಿ ನೀಡಿ ಭಾರಿ ಮಳೆಯಿಂದ ಉಂಟಾದ ಬೆಳೆ ಹಾಗೂ ಭೂ ಹಾನಿಯನ್ನು ಪರಿಶೀಲಿಸಿದ ಅವರು, ರೈತರಿಗೆ ಸಂಭವಿಸಿದ ನಷ್ಟ, ಭೂಮಿಯ ಸ್ಥಿತಿ ಹಾಗೂ ಬೆಳೆ ಹಾನಿಯ ಕುರಿತು ಅಧಿಕಾರಿಗಳಿಂದ ವಿವರವಾದ ಮಾಹಿತಿ ಪಡೆದು, ಸರ್ಕಾರದ ನಿಯಮಾನುಸಾರ ಭೂ ಆಧಾರಿತ ಮೌಲ್ಯಮಾಪನದಲ್ಲಿ ಶೇ.33 ಕ್ಕಿಂತ ಹೆಚ್ಚು ಹಾನಿಗೊಳಗಾದ ರೈತರಿಗೆ ಪ್ರತಿ ಎಕರೆಗೆ 22,000 ರೂ.ಪರಿಹಾರ ಮಂಜೂರು ಮಾಡುವುದಾಗಿ ತಿಳಿಸಿದರು.

ಅರ್ಹ ರೈತರ ಸಂಪೂರ್ಣ ವಿವರಗಳನ್ನು ತ್ವರಿತವಾಗಿ ಸಂಗ್ರಹಿಸಿ ಪರಿಹಾರ ವಿತರಣೆಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅದೇ ರೀತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಶೆಟ್ಟಿಕೆರೆ ಹೋಬಳಿ ವ್ಯಾಪ್ತಿಯ ಹಾಲುಗೊಣ ಗ್ರಾಮಕ್ಕೆ ಭೇಟಿ ನೀಡಿ ಗಾಳಿ–ಮಳೆಯಿಂದ ತೆಂಗು, ಬಾಳೆ ಹಾಗೂ ಅಡಿಕೆ ಬೆಳೆಗಳಿಗೆ ಉಂಟಾದ ಹಾನಿಯನ್ನು ಪರಿಶೀಲಿಸಿದರು. ಅನೇಕ ಮರಗಳು ಉರುಳಿ ಬೆಳೆ ನಷ್ಟವಾಗಿರುವುದು ಹಾಗೂ ಬೆಸ್ಕಾಂ ವಿದ್ಯುತ್ ಲೈನ್‌ಗಳ ಮೇಲೆ ಮರಗಳು ಮತ್ತು ಕೊಂಬೆಗಳು ಬಿದ್ದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುವುದನ್ನು ಗಮನಿಸಿದ



ಜಿಲ್ಲಾಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳಿಗೆ ಬೆಳೆ ಹಾನಿಯ ಸಮಗ್ರ ದಾಖಲೆ ಸಿದ್ಧಪಡಿಸುವುದು, ಪ್ರತಿ ರೈತನ ನಷ್ಟವನ್ನು ನಿಖರವಾಗಿ ದಾಖಲಿಸುವುದು ಹಾಗೂ ತ್ವರಿತ ವರದಿ ಸಲ್ಲಿಸುವಂತೆ ಸೂಚಿಸಿದರಲ್ಲದೆ, ಜೊತೆಗೆ ಉರುಳಿದ ಮರಗಳು ಮತ್ತು ಕೊಂಬೆಗಳನ್ನು ತಕ್ಷಣ ತೆರವುಗೊಳಿಸಿ ಬೆಸ್ಕಾಂ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ವಿದ್ಯುತ್ ಸರಬರಾಜನ್ನು ಶೀಘ್ರ ಪುನಃಸ್ಥಾಪಿಸುವಂತೆ ನಿರ್ದೇಶನ ನೀಡಿದರು.ಅರ್ಹ ರೈತರಿಗೆ ಸರ್ಕಾರದ ಮಾರ್ಗಸೂಚಿಗಳಂತೆ ಪರಿಹಾರ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಲು, ಹಾನಿ ಮೌಲ್ಯಮಾಪನ ಕಾರ್ಯಗಳನ್ನು ಆದ್ಯತೆಯಿಂದ ಪೂರ್ಣಗೊಳಿಸಲು ಹಾಗೂ ಎಲ್ಲಾ ವರದಿಗಳನ್ನು ಶೀಘ್ರ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪರಿಶೀಲನಾ ಸಂದರ್ಭದಲ್ಲಿ ತಿಪಟೂರು ಹಾಗೂ ಚಿಕ್ಕನಾಯಕನಹಳ್ಳಿ ತಹಶೀಲ್ದಾರ್, ಚಿಕ್ಕನಾಯಕನಹಳ್ಳಿ ಮುಖ್ಯಾಧಿಕಾರಿ, ಜಿಲ್ಲಾ ತೋಟಗಾರಿಕೆ ಉಪ ನಿರ್ದೇಶಕಿ ಶಾರದಮ್ಮ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಯಡಿಯೂರಪ್ಪನವರ ಜನಪರ ಹೋರಾಟ, ತ್ಯಾಗ ಸ್ಮರಣೀಯ

## ಅಭಿಮಾನೋತ್ಸವ ಪೂರ್ವಭಾವಿ ಸಭೆಯಲ್ಲಿ ವಿಜಯೇಂದ್ರ ಶ್ಲಾಘನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಬಿ.ಎಸ್. ಯಡಿಯೂರಪ್ಪ ಎಂದರೆ ಹೋರಾಟದ, ಪರಿಶ್ರಮದ, ತ್ಯಾಗದ ಸಂಕೇತ. ರೈತರ, ಬಡವರ, ಮಹಿಳೆಯರ ಪರ 50 ವರ್ಷಗಳಿಂದ ನಿರಂತರ ಹೋರಾಟ ಮಾಡಿಕೊಂಡು ಬಂದ ಯಡಿಯೂರಪ್ಪನವರು ಅಧಿಕಾರ ಅನುಭವಿಸಿದ್ದು ಕೇವಲ 5 ವರ್ಷ ಮಾತ್ರ. ನಗರ ಭಾಗದಲ್ಲಿ ಸೀಮಿತವಾಗಿದ್ದ ಬಿಜೆಪಿಯನ್ನು ಹಳ್ಳಿಹಳ್ಳಿಗೆ ತಲುಪಿಸಿ ಪಕ್ಷವನ್ನು ಬೆಳೆಸಿದ್ದರಲ್ಲಿ ಇವರ ಶ್ರಮ ಸಾಕ್ಷಿದೆ ಎಂಬುದು ಎಲ್ಲರಿಗೂ ಗೊತ್ತು. ಇಂತಹ ನಾಯಕನ 50 ವರ್ಷಗಳ ಹೋರಾಟದ ಬದುಕು ಸಂಭ್ರಮಿಸುವ ಬಿಎಸ್‌ವೈ ಅಭಿಮಾನೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಮನವಿ ಮಾಡಿದರು.

ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಯಡಿಯೂರಪ್ಪನವರ 50ನೇ ವರ್ಷದ ಅಭಿಮಾನೋತ್ಸವ ಸಮಾರಂಭದ ಅಂಗವಾಗಿ ಗುರುವಾರ ನಗರದ ಸ್ನೇಹಸಂಗಮ ಬ್ಯಾಂಕ್ ಸಭಾಂಗಣದಲ್ಲಿ ನಡೆದ ಮುಖಂಡರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ವಿಜಯೇಂದ್ರ, ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎಂದು ಕನಸಿನಲ್ಲಿಯೂ ಕಲ್ಪಿಸಿಕೊಳ್ಳಲಾಗದ ಕಾಲಘಟ್ಟದಲ್ಲಿ ಬಿ.ಎಸ್. ಯಡಿಯೂರಪ್ಪನವರು ರೈತರ, ಬಡವರ ಪರ ಹೋರಾಟ ಮಾಡಿಕೊಂಡು ಜೊತೆಜೊತೆಯಲ್ಲಿ ಪಕ್ಷವನ್ನೂ ಕಟ್ಟಿಬೆಳೆಸಿದರು. ಒಂದು ಕಾಲದಲ್ಲಿ ಇವರೊಬ್ಬರೇ ಬಿಜೆಪಿ ಶಾಸಕರಾಗಿದ್ದರು. ನಮ್ಮ ಪಕ್ಷಕ್ಕೆ ಬನ್ನಿ ಮಂತ್ರಿ ಮಾಡುತ್ತೇವೆ ಎಂದು ಆಡಳಿತ ಪಕ್ಷದ ನಾಯಕರೂ ಆಹ್ವಾನಿಸಿದರೂ ಬಿಎಸ್‌ವೈ ಪಕ್ಷ ಬಿಡಲಿಲ್ಲ, ಇವರು ಯಾವತ್ತೂ ಅಧಿಕಾರಕ್ಕಾಗಿ ಹಪಹಪಿಸಲಿಲ್ಲ ಎಂದರು.

ಯಡಿಯೂರಪ್ಪನವರು ಮುಖ್ಯಮಂತ್ರಿಯಾದ ಅವಧಿಯಲ್ಲಿ ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿತ್ತು. ಒಬ್ಬರೇ ಹೋಗಿ ಸಂತ್ರಸ್ತರ ನೆರವಿಗೆ ನಿಂತರು. ರಾಯಚೂರು, ಕೊಪ್ಪಳ, ಬೀದರ್ ಜಿಲ್ಲೆಗಳಲ್ಲಿ ಬಡವರು ಮನೆ ಕಳೆದುಕೊಂಡಾಗ ಕೇಂದ್ರ ಸರ್ಕಾರದ ಒಂದು ಲಕ್ಷ ರೂ. ಅನುದಾನದ ಜೊತೆ ನಾಲ್ಕು



ಲಕ್ಷ ಸೇರಿಸಿ ಐದು ಲಕ್ಷ ರೂ.ಗಳಲ್ಲಿ ಮನೆ ನಿರ್ಮಿಸಿಕೊಟ್ಟರು. ಆಗ ಕುಟುಂಬದವರೊಂದಿಗೆ ದೀಪಾವಳಿ ಆಚರಿಸಬೇಕಾದ ಮುಖ್ಯಮಂತ್ರಿ ಯಡಿಯೂರಪ್ಪನವರು ಸಂತ್ರಸ್ತರೊಂದಿಗೆ ದೀಪಾವಳಿ ಆಚರಿಸಿ ಅವರು ಕುಟುಂಬಗಳಲ್ಲಿ ಬೆಳಕು ಮೂಡಿಸಿದರು ಎಂದು ಬಿ.ವೈ. ವಿಜಯೇಂದ್ರ ಸ್ಮರಿಸಿಕೊಂಡರು.

ಅಭಿಮಾನೋತ್ಸವ ಆಚರಣೆ ಯಡಿಯೂರಪ್ಪನವರಿಗೆ ಇಷ್ಟವಿರಲಿಲ್ಲ. ಆದರೆ, ರಾಜ್ಯದ ಲಕ್ಷಾಂತರ ಕಾರ್ಯಕರ್ತರು, ಅವರ ಅಭಿಮಾನಿಗಳ ಅಪೇಕ್ಷೆಯಂತೆ ಚಿತ್ರದುರ್ಗದಲ್ಲಿ ಅವರ ಅಭಿಮಾನೋತ್ಸವ ಆಚರಿಸಲಾಗುತ್ತಿದೆ. ಪಕ್ಷಾತೀತವಾಗಿ ಯಡಿಯೂರಪ್ಪನವರ ಅಭಿಮಾನಿಗಳು ಹತ್ತು ಲಕ್ಷ ಜನ ಸೇರುವ ನಿರೀಕ್ಷೆ ಇದ್ದು, ಯಶಸ್ವಿಗೊಳಿಸಿ, ಜನಪರವಾಗಿ ದುಡಿದ ನಾಯಕ ಯಡಿಯೂರಪ್ಪನವರಿಗೆ ಗೌರವ ಸಲ್ಲಿಸೋಣ ಎಂದು ಹೇಳಿದರು.

ಮಾಜಿ ಉಪ ಮುಖ್ಯಮಂತ್ರಿ, ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಮಾತನಾಡಿ, ಯಡಿಯೂರಪ್ಪನವರು 50 ವರ್ಷ ಕಾಲ ಸಾಮಾಜಿಕ ಸೇವೆಗೆ ತಮ್ಮನ್ನು ತಾವು ಸಮರ್ಪಿಸಿಕೊಂಡರು. ಹಳ್ಳಿಹಳ್ಳಿ ತಿರುಗಿ ಬಿಜೆಪಿ ಕಟ್ಟಿದರು. ಒಂದು ಶಾಸಕ ಸ್ಥಾನದಿಂದ 110 ಸ್ಥಾನ ತಲುಪಿ ಬಿಜೆಪಿ ಅಧಿಕಾರಕ್ಕೆ ತರಲು ಪ್ರಮುಖ ಕಾರಣಕರ್ತರು ಯಡಿಯೂರಪ್ಪನವರು. ಅವರು ಕಟ್ಟಿದ ಪಕ್ಷದ ಫಲಾನುಭವಿಗಳು ನಾವೆಲ್ಲಾ ಎಂದು ಹೇಳಿದರು.

ಅಭಿಮಾನೋತ್ಸವ ಬೇಡ ಎಮದು ಯಡಿಯೂರಪ್ಪ ಹೇಳಿದ್ದರು. ಆದರೆ ಪಕ್ಷದ ಕಾರ್ಯಕರ್ತರಲ್ಲಿ ಉತ್ಸಾಹ ತುಂಬಲು, ಕಾಂಗ್ರೆಸ್ ಸರ್ಕಾರದ ದುರಾಡಳಿತ, ಕುರ್ಚಿ ಕಾದಾಟದ ವಿರುದ್ಧ ಜನರನ್ನು ಜಾಗೃತಿಗೊಳಿಸಲು ಅಭಿಮಾನೋತ್ಸವ ಅಗತ್ಯವಿದೆ. ಅದು ಅದ್ದೂರಿಯಾಗಿ ನಡೆದು ಯಶಸ್ವಿಯೂ ಆಗುತ್ತದೆ ಎಂದು ಗೋವಿಂದ ಕಾರಜೋಳ ತಿಳಿಸಿದರು.

ಶಾಸಕ ಬಿ.ಸುರೇಶ್‌ಗೌಡ ಮಾತನಾಡಿ, ಯಡಿಯೂರಪ್ಪನವರಂತಹ ಹೋರಾಟಗಾರರನ್ನು ನಾವು ಇನ್ನ್ಯಾರನ್ನೂ ನೋಡಲಾಗುವುದಿಲ್ಲ. ಅವರ ಹೆಸರು ಕೇಳಿದರೆ ಕಾರ್ಯಕರ್ತರಲ್ಲಿ ಹುರುಪು ಮೂಡುತ್ತದೆ. ಅವರು ಬಿಜೆಪಿಯ ಶಕ್ತಿಯಾಗಿದ್ದಾರೆ. ಅವರ ರಾಜಕೀಯ ಜೀವನ ಇಂದಿನವರಿಗೆ ಮಾದರಿಯಾಗಿದೆ. ಅವರ ಸೇವೆ, ಕೊಡುಗೆ ಸ್ಮರಣೀಯ ಎಂದರು.

ಶಾಸಕ ಜಿ.ಬಿ. ಜ್ಯೋತಿಗಣೇಶ್ ಮಾತನಾಡಿ, ದಕ್ಷಿಣ ಭಾರತದಲ್ಲಿ ಬಿಜೆಪಿ ಬಾಗಿಲು ತೆರೆಯಲು ಯಡಿಯೂರಪ್ಪನವರ ಕೊಡುಗೆ ಗಣನೀಯ. ಯಡಿಯೂರಪ್ಪನವರು ರಾಜ್ಯದಲ್ಲಿ ಬಿಜೆಪಿಯನ್ನು ತಳಮಟ್ಟದಿಂದ ಸಂಘಟಿಸಲು ದೊಡ್ಡ ಶ್ರಮ, ತ್ಯಾಗ ಮಾಡಿದ್ದಾರೆ. ಇಂದು ಬಿಜೆಪಿಯಲ್ಲಿ ಮುಖ್ಯಮಂತ್ರಿಗಳು,

### ದನಗಳಿಗೆ ನೀರು ಕುಡಿಸಲು ಹೋಗಿ ಕಾಲು ಜಾರಿ ಬಾಲಕ ಸಾವು

## ಮುಗಿಲು ಮುಟ್ಟಿದ ಕುಟುಂಬಸ್ಥರ ಆಕ್ರಂದನ



ಸೂರ್ಯಪ್ರಗತಿನ್ಯೂಸ್.ಕಾಂ

ಗುಬ್ಬಿ: ದನಗಳಿಗೆ ನೀರು ಕುಡಿಸಲು ಹೋದ 13 ವರ್ಷದ ಬಾಲಕ ಕಾಲು ಜಾರಿ ಬಿದ್ದು ನೀರಿನಲ್ಲಿ ಮುಳುಗಿ ನೀರು ಪಾಲಾದ ಹೃದಯವಿದ್ರಾವಕ ಘಟನೆ ಗುಬ್ಬಿ ತಾಲ್ಲೂಕಿನ ಕಸಬ ಹೋಬಳಿಯ ಕಿಟ್ಟದಕುಪ್ಪೆ ಗ್ರಾಮದಲ್ಲಿ ನಡೆದಿದೆ.

ಕಿಟ್ಟದಕುಪ್ಪೆ ಗ್ರಾಮದ ಬಾಲಕ ಮಧು (13) ಸ್ಥಳೀಯ ಬಸವರಾಜ್ ಹಾಗೂ ಸಿದ್ದಗಂಗಮ್ಮ ದಂಪತಿಯ ಪುತ್ರ ಮಧು ದನಗಳಿಗೆ ನೀರು ಕುಡಿಸಲು ಕೆರೆ ಬಳಿ ಹೋದಾಗ ಕಾಲು ಜಾರಿ ಈ ದುರ್ಘಟನೆ ನಡೆದಿದೆ.

ಬಾಲಕ ಮಧು ದನಗಳಿಗೆ ನೀರು ಕುಡಿಸಲು ಊರಿನ ಸಮೀಪದ ಕೆರೆಯ ಬಳಿ ತೆರಳಿದ್ದು ದನಗಳು ಮಾತ್ರ ವಾಪಸ್ಸು ಮನೆಗೆ ಹೋಗಿದ್ದು ಮಗ ಸಂಜೆಯಾದರು ಮನೆಗೆ ಮರಳದ ಹಿನ್ನೆಲೆಯಲ್ಲಿ ಕುಟುಂಬದವರು, ಗ್ರಾಮಸ್ಥರು ಹಾಗೂ ಪೊಲೀಸರು ಹುಡುಕಾಟ ನಡೆಸಿ ಇಡೀ ರಾತ್ರಿ ಶೋಧ ಕಾರ್ಯ ನಡೆಸಿದ್ದು.ಇಂದು ಕೆರೆಯ ನೀರಿನಲ್ಲಿ ಮಗು ತೇಲುತ್ತಿರುವ ಬಗ್ಗೆ ಮಾಹಿತಿ ತಿಳಿದು ಮುಂಜಾನೆ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಶೋಧ ಕಾರ್ಯ ನಡೆಸಿ ಬಾಲಕನ ಶವವನ್ನು ಹೊರತೆಗೆದರು.

ಈ ದುರ್ಘಟನೆಯಿಂದ ಇಡೀ ಗ್ರಾಮದಲ್ಲಿ ಸೂತಕದ ಛಾಯೆ ಮೂಡಿಸಿದ್ದು ಮೃತ ಬಾಲಕನ ಪೋಷಕರ ಆಕ್ರಂದನ ಮುಗಿಲು ಮುಟ್ಟುವ ಜೊತೆಗೆ ಮನಕಲಕುವಂತಿದೆ. ದಿನಗೂಲಿ ಕೆಲಸ ಮಾಡಿ ಜೀವನ ಸಾಗಿಸುತ್ತಿದ್ದ ಕಡುಬಡ ಕುಟುಂಬಕ್ಕೆ ಇದು ಭಾರೀ ಆಘಾತವಾಗಿದೆ. ಮೃತನ ಕುಟುಂಬಕ್ಕೆ ಸೂಕ್ತ ಪರಿಹಾರ ಒದಗಿಸುವ ಕೆಲಸ ಸಂಬಂಧಪಟ್ಟ ಅಧಿಕಾರಿಗಳು ಮಾಡಬೇಕು ಎಂದು ಸ್ಥಳೀಯ ಗ್ರಾಮಸ್ಥರು ಒತ್ತಾಯ ಮಾಡಿದ್ದಾರೆ.

ಗುಬ್ಬಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಗುಬ್ಬಿ ಸಾರ್ವಜನಿಕ ಆಸ್ಪತ್ರೆಯ ಶವಗಾರದಲ್ಲಿ ಮೃತ ಬಾಲಕನ ಶವ ಇರಿಸಲಾಗಿದ್ದು ಮರಣೋತ್ತರ ಪರೀಕ್ಷೆಯ ಬಳಿಕ ಬಾಲಕನ ಶವವನ್ನು ಕುಟುಂಬಕ್ಕೆ ನೀಡಲಾಗಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಕೋಲ್ಡ್ ಡ್ರಿಂಕ್ ಜೊತೆ ಚಿಪ್ಸ್ ತಿನ್ನುವ ಅಭ್ಯಾಸವಿದ್ಯಾ ? ಇಲ್ಲಿವೆ ಕೆಲವು ವಿಷಯಗಳು

ಇದು ಬೇಸಿಗೆ ಕಾಲವಾದ್ದರಿಂದ ಈ ಸಮಯದಲ್ಲಿ ಜನ ಹೆಚ್ಚಾಗಿ ತಂಪು ಪಾನೀಯಗಳ ಸೇವನೆ ಮಾಡಲು ಇಷ್ಟಪಡುತ್ತಾರೆ. ಅದರಲ್ಲಿ ಕೆಲವರು ತಂಪು ಪಾನೀಯಗಳ ಜೊತೆಗೆ ಚಿಪ್ಸ್ ಅನ್ನು ಸಹ ತಿನ್ನುತ್ತಾರೆ, ಆದರೆ ಈ ರೀತಿಯ ಆಹಾರ ಸೇವನೆಯು ಆರೋಗ್ಯಕ್ಕೆ ಹಾನಿ ಮಾಡುತ್ತದೆ. ಈ ರೀತಿ ಅಭ್ಯಾಸ ನಿಮಗೂ ಇದ್ದಲ್ಲಿ ನೀವು ಕೆಲವು ವಿಷಯಗಳನ್ನು ತಿಳಿದುಕೊಳ್ಳಲೇಬೇಕು ಜೊತೆಗೆ ಈ ರೀತಿ ಕೋಲ್ಡ್ ಡ್ರಿಂಕ್ ಜೊತೆಗೆ ಚಿಪ್ಸ್ ತಿನ್ನುವುದರಿಂದ ಯಾವ ರೀತಿಯ ಸಮಸ್ಯೆಗಳಾಗುತ್ತವೆ, ಇದಕ್ಕೆ ಪರ್ಯಾಯವಾಗಿ ಏನು ಮಾಡಬಹುದು ಎಂಬುದನ್ನು ಸ್ಟೋರಿ ಮೂಲಕ ತಿಳಿದುಕೊಳ್ಳಿ.

ಸಿಗೆಯ ತಾಪಮಾನ ಹೆಚ್ಚಾದಂತೆ ಜನ ತಂಪಾದ ಪಾನೀಯಗಳತ್ತ ಹೆಚ್ಚು ಆಕರ್ಷಿತರಾಗುತ್ತಾರೆ. ಮಾರುಕಟ್ಟೆಯಲ್ಲಿ ಬಗೆಬಗೆಯ ಕೋಲ್ಡ್ ಡ್ರಿಂಕ್‌ಗಳು ಇರುವುದರಿಂದ ಅದನ್ನು ಕುಡಿದು ಆನಂದಿಸುತ್ತಾರೆ. ಅದರಲ್ಲಿ ಕೆಲವರು ಅವುಗಳ ಜೊತೆ ಚಿಪ್ಸ್ ಕೂಡ ತಿನ್ನುತ್ತಾರೆ. ಇದು ಕೆಲವರಿಗೆ ಸಾಮಾನ್ಯ ಅಭ್ಯಾಸಗಳಲ್ಲಿ ಒಂದು. ಆದರೆ ಆರೋಗ್ಯ ತಜ್ಞರ ಪ್ರಕಾರ, ಈ ಆಹಾರ ಸಂಯೋಜನೆ ಒಳ್ಳೆಯದಲ್ಲ. ಇದು ದೇಹಕ್ಕೆ ಹಾನಿಕಾರಕವಾಗಬಹುದು ಎನ್ನುತ್ತಾರೆ. ಈ ರೀತಿ ಅಭ್ಯಾಸ ನಿಮಗೂ ಇದ್ದಲ್ಲಿ ನೀವು ಕೆಲವು ವಿಷಯಗಳನ್ನು ತಿಳಿದುಕೊಳ್ಳಲೇಬೇಕು ಜೊತೆಗೆ ಈ ರೀತಿ ಕೋಲ್ಡ್ ಡ್ರಿಂಕ್ ಜೊತೆಗೆ



ಚಿಪ್ಸ್ ತಿನ್ನುವುದರಿಂದ ಯಾವ ರೀತಿಯ ಸಮಸ್ಯೆಗಳಾಗುತ್ತವೆ ಇದಕ್ಕೆ ಪರ್ಯಾಯವಾಗಿ ಏನು ಮಾಡಬಹುದು ಎಂಬುದನ್ನು ಸ್ಟೋರಿ ಮೂಲಕ ತಿಳಿದುಕೊಳ್ಳಿ.

ಕೋಲ್ಡ್ ಡ್ರಿಂಕ್ ಜೊತೆಗೆ ಚಿಪ್ಸ್ ಯಾಕೆ ಒಳ್ಳೆಯದಲ್ಲ?

ಕೋಲ್ಡ್ ಡ್ರಿಂಕ್‌ಗಳಲ್ಲಿ ಹೆಚ್ಚು ಪ್ರಮಾಣದ ಸಕ್ಕರೆ ಮತ್ತು ಕೆಲವೊಮ್ಮೆ ಕ್ಯಾಫಿನ್ ಇರುತ್ತದೆ. ಇದು ದೇಹದ ದಾಹವನ್ನು ತಾತ್ಕಾಲಿಕವಾಗಿ ತಣಿಸಿದರೂ, ವಾಸ್ತವದಲ್ಲಿ ದೇಹವನ್ನು ಡಿಹೈಡ್ರೇಟ್ ಮಾಡಬಹುದು. ಬೇಸಿಗೆಯಲ್ಲಿ ದೇಹಕ್ಕೆ ಅಗತ್ಯವಾದ ಹೈಡ್ರೇಶನ್ ಕಡಿಮೆಯಾಗುವುದರಿಂದ ದೌರ್ಬಲ್ಯ, ತಲೆಸುತ್ತು ಮತ್ತು ದೇಹದ ತಾಪಮಾನ ನಿಯಂತ್ರಣದಲ್ಲಿ ಸಮಸ್ಯೆಗಳು ಉಂಟಾಗಬಹುದು. ಜೊತೆಗೆ ಚಿಪ್ಸ್‌ಗಳಲ್ಲಿ ಹೆಚ್ಚಿನ ಉಪ್ಪು ಮತ್ತು ಟ್ರಾನ್ಸ್ ಫ್ಯಾಟ್ ಇರುತ್ತದೆ. ಇದು ದೇಹದಲ್ಲಿ ನೀರಿನ ಕೊರತೆಯನ್ನು ಹೆಚ್ಚಿಸುವುದರ ಜೊತೆಗೆ ಎಲೆಕ್ಟ್ರೋಲೈಟ್ ಸಮತೋಲನವನ್ನು ಹಾಳುಮಾಡಬಹುದು. ಹೆಚ್ಚಾಗಿ ಉಪ್ಪಿನ ಸೇವನೆ ದಾಹವನ್ನು ಹೆಚ್ಚಿಸಿ, ಮತ್ತೆ ಮತ್ತೆ ಕೋಲ್ಡ್ ಡ್ರಿಂಕ್ ಸೇವನೆಗೆ ಕಾರಣವಾಗುತ್ತದೆ. ಇದರಿಂದ ದೇಹದಲ್ಲಿ ಅಸಮತೋಲನ ಹೆಚ್ಚಾಗುವ ಸಾಧ್ಯತೆ ಇದೆ.

ಯಾವ ರೀತಿಯ ಆರೋಗ್ಯ ಸಮಸ್ಯೆಗಳು ಉಂಟಾಗುತ್ತದೆ? ತಜ್ಞರು ಹೇಳುವಂತೆ, ಈ ಆಹಾರ ಸಂಯೋಜನೆ ನಿಯಮಿತವಾಗಿ ಸೇವಿಸಿದರೆ ತೂಕ ಹೆಚ್ಚಳ, ಜೀರ್ಣಕ್ರಿಯೆ ಸಮಸ್ಯೆಗಳು ಮತ್ತು ದೀರ್ಘಕಾಲದಲ್ಲಿ ಹೃದಯ ಸಂಬಂಧಿತ ಸಮಸ್ಯೆಗಳ ಅಪಾಯವೂ ಹೆಚ್ಚಾಗಬಹುದು.

# ಎಸ್‌ಎಸ್‌ಐಟಿ ಕಾಲೇಜಿನಲ್ಲಿ ರಾಜ್ಯ ಮಟ್ಟದ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯವಳಿ ಆಯೋಜನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರಿನ : ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ದೈಹಿಕ ಶಿಕ್ಷಣ ವಿಭಾಗದಿಂದ ಏಪ್ರಿಲ್ 28 ಮತ್ತು 29 ರಂದು ರಾಜ್ಯ ಮಟ್ಟದ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಯನ್ನು ಕಾಲೇಜಿನ ಆವರಣದಲ್ಲಿ ಆಯೋಜನೆ ಮಾಡಲಾಗಿತ್ತು. ಈ ಕ್ರಿಕೆಟ್ ಪಂದ್ಯಾವಳಿಯಲ್ಲಿ ಧಾರವಾಡ, ಮಂಡ್ಯ, ಬೆಂಗಳೂರು, ಹಾಸನ, ತುಮಕೂರು ನಿಂದ 16 ತಂಡಗಳು ಟೆನ್ನಿಸ್ ಕ್ರಿಕೆಟ್ ಪಂದ್ಯವಳಿಯಲ್ಲಿ ಪಾಲ್ಗೊಂಡಿದ್ದವು.




ಈ ಪಂದ್ಯದಲ್ಲಿ ಬೆಂಗಳೂರಿನ ಆಚಾರ್ಯ ಕಾಲೇಜು ಮೊದಲ ಸ್ಥಾನವನ್ನು ಪಡೆದುಕೊಂಡರೆ ದ್ವಿತೀಯ ಸ್ಥಾನವನ್ನು ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಕ್ರಿಕೆಟ್ ತಂಡ ಪಡೆದುಕೊಂಡಿತು. ಮೊದಲ ಸ್ಥಾನ ಪಡೆದವರಿಗೆ 15 ಸಾವಿರ ನಗದು ಹಾಗೂ ಆಕರ್ಷಕ ಪಾರಿತೋಷಕ ಹಾಗೂ ದ್ವಿತೀಯ ಸ್ಥಾನ ಪಡೆದವರಿಗೆ 10 ಸಾವಿರ ನಗದು ಮತ್ತು ಪಾರಿತೋಷಕವನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ. ಮಹಾಂತೇಶ್ ಎಂ. ನಡಕಟ್ಟಿ ವಿತರಿಸಿದರು.

ಪ್ರಾಂಶುಪಾಲರಾದ ಮಹಾಂತೇಶ್ ನಡಕಟ್ಟಿ ಮಾತನಾಡಿ ಕ್ರೀಡೆಯಲ್ಲಿ ಸೋಲು ಗೆಲುವು ಸಾಮಾನ್ಯ ಇವತ್ತು ಸೋತವನು ನಾಳೆ ಗೆಲ್ಲುತ್ತಾನೆ, ಇಂದು ಗೆದ್ದವನು ನಾಳೆ ಸೋಲುತ್ತಾನೆ ಹಾಗಾಗಿ ಸೋಲು ಗೆಲುವನ್ನು ಎಲ್ಲರೂ ಸಮಾನವಾಗಿ ನೋಡಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ತಿಳಿಸಿದರು.

ಕಾರ್ಯಕ್ರಮದ ನಿರೂಪಣೆಯನ್ನು ಸಿವಿಲ್ ವಿಭಾಗದ ರಾಕೇಶ್ ಪಟೇಲ್ ಹಗೂ ಕಂಪ್ಯೂಟರ್ ಸೈನ್ಸ್ ವಿಭಾಗದ ನಿರ್ಮಲ ಜಿ.ರವರು ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಅಕಾಡೆಮಿಕ್ ಡೀನ್ ಡಾ. ಎಸ್ ರೇಣುಕಾಲತಾ, ಮೋಹನ್ ಕುಮಾರ್ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕ ರುದ್ರೇಶ್ ಕೆ.ಆರ್, ಪ್ರಾಧ್ಯಾಪಕರಾದ ಮೆಕಾನಿಕಲ್ ವಿಭಾಗದ ಮೆಘಾನಿ ರೆಡ್ಡಿ, ಯೋಗೀಶ್, ಡಾ.ಯೋಗಾನಂದ್, ಸೇರಿದಂತೆ ಎಲ್ಲಾ ಕ್ರೀಡಾ ಸಮಿತಿಯ ಸದಸ್ಯರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಬಂಗಾಳದಲ್ಲಿ ಮತ್ತೆ ನಾವೇ ಸರ್ಕಾರ ರಚಿಸುತ್ತೇವೆ; ಮಮತಾ ಬ್ಯಾನರ್ಜಿ ವಿಶ್ವಾಸ

ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯಲ್ಲಿ ಟಿಎಂಸಿ 226ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುತ್ತದೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. 'ಬಂಗಾಳದಲ್ಲಿ ನಾವು ಮತ್ತೆ ಸರ್ಕಾರ ರಚಿಸುತ್ತೇವೆ' ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮೇ 4ರಂದು ಬಂಗಾಳ ವಿಧಾನ ಸಭಾ ಚುನಾವಣೆಯ ಫಲಿತಾಂಶಗಳು ಪ್ರಕಟವಾದ ನಂತರ ಟಿಎಂಸಿ ಸರ್ಕಾರ ರಚಿಸುತ್ತದೆ ಎಂದು ಮಮತಾ ಬ್ಯಾನರ್ಜಿ ವಿಶ್ವಾಸ ವ್ಯಕ್ತಪಡಿಸಿದರು. ನಿನ್ನೆ ಪ್ರಕಟವಾದ ಎಕ್ಸಿಟ್ ಪೋಲ್ ಬಳಿಕ ಮಮತಾ ಬ್ಯಾನರ್ಜಿ ಮೊದಲ ಬಾರಿಗೆ ಪ್ರತಿಕ್ರಿಯೆ ನೀಡಿದ್ದಾರೆ. ಆ ಸಮೀಕ್ಷೆಯಲ್ಲಿ ಬಂಗಾಳದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎನ್ನಲಾಗಿತ್ತು. ಪಶ್ಚಿಮ ಬಂಗಾಳದ (ಫಃಜಿಣ ಃಜಟರಿಂಜಿಟ) ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಇಂದು ವಿಡಿಯೋ ಸಂದೇಶ ಬಿಡುಗಡೆ ಮಾಡಿದ್ದು, ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷವು ನಿರ್ಣಾಯಕ ಗೆಲುವಿನ ಹಾದಿಯಲ್ಲಿದೆ ಎಂದು ಹೇಳಿದ್ದಾರೆ. ಚುನಾವಣೆಯ ಫಲಿತಾಂಶವು ಈಗಾಗಲೇ ತಮ್ಮ ಪಕ್ಷದ ಪರವಾಗಿ ಸ್ಪಷ್ಟವಾಗಿದೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಇತ್ತೀಚೆಗೆ ಮುಕ್ತಾಯಗೊಂಡ ವಿಧಾನ ಸಭಾ ಚುನಾವಣೆಗೆ ತಮ್ಮ ವಿಶ್ವಾಸವನ್ನು ಬಲಪಡಿಸುತ್ತಾ, "ನಾವು 226ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುತ್ತೇವೆ" ಎಂದು ಅವರು ಹೇಳಿದ್ದಾರೆ.

"ಎಕ್ಸಿಟ್ ಪೋಲ್‌ಗಳು ಬಿಜೆಪಿ ಕಚೇರಿಯಿಂದ ಬಂದಿವೆ. ಅದರಲ್ಲಿ ಹೇಳಿರುವ ಸಂಖ್ಯೆಗಳು ಕಟ್ಟುಕಥೆಯಾಗಿದ್ದು, ಟಿಎಂಸಿ ಕಾರ್ಯಕರ್ತರನ್ನು ನಿರಾಶೆಗೊಳಿಸುವ ಉದ್ದೇಶವನ್ನು ಹೊಂದಿವೆ" ಎಂದು ಮಮತಾ ಬ್ಯಾನರ್ಜಿ ವೀಡಿಯೊ ಸಂದೇಶದಲ್ಲಿ ಹೇಳಿದ್ದಾರೆ. ತಮ್ಮ ಕ್ಷೇತ್ರವಾದ ಭವಾನಿಪುರದಲ್ಲಿ ಇಡೀ ರಾತ್ರಿ ದಾಳಿಗಳನ್ನು



ನಡೆಸಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

"ಬಿಜೆಪಿ ಅಂತಿಮ ಆಟವಾಡಿದೆ. ನಿಜವಾದ ಅಂಕಿಅಂಶಗಳನ್ನು ಬಿಡುಗಡೆ ಮಾಡಿದ್ದರೆ ಷೇರು ಮಾರುಕಟ್ಟೆಗಳು ಉರುಳುತ್ತಿದ್ದವು. ಜನರು ಒಟ್ಟಾಗಿರಬೇಕು. ಮತ ಎಣಿಕೆಯ ಮೇಲೆ ನಿಗಾ ಇಡಬೇಕು. ರಾತ್ರಿಯಿಡೀ ಎಚ್ಚರವಾಗಿರಿ" ಎಂದು ಅವರು ಹೇಳಿದ್ದಾರೆ. "ಬಿಜೆಪಿ ಅಂತಿಮ ಆಟ ಆಡಿದೆ. ನಿಜವಾದ ಅಂಕಿ-ಅಂಶಗಳು ಬಿಡುಗಡೆಯಾದರೆ ಷೇರು ಮಾರುಕಟ್ಟೆಗಳು ಕುಸಿಯುತ್ತಿದ್ದವು. ಜನರು ಒಟ್ಟಾಗಿ ಉಳಿಯಬೇಕು ಮತ್ತು ಎಣಿಕೆಯ ಮೇಲೆ ನಿಗಾ ಇಡಬೇಕು" ಎಂದು ಸಿಎಂ ಹೇಳಿದ್ದಾರೆ.

2026ರ ವಿಧಾನಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ (ಬಿಜೆಪಿ) ಪಶ್ಚಿಮ ಬಂಗಾಳವನ್ನು ಗೆಲ್ಲುತ್ತದೆ ಎಂದು ಮತದಾನೋತ್ತರ ಸಮೀಕ್ಷೆಗಳು ಅಂದಾಜಿಸಿವೆ. ಚಾಣಕ್ಯ ಸ್ಟ್ರಾಟಜೀಸ್‌ನ ನಿರ್ಗಮನ ಸಮೀಕ್ಷೆಯು ಬಿಜೆಪಿ 150-160 ವಿಧಾನಸಭಾ ಸ್ಥಾನಗಳನ್ನು ಮತ್ತು ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ರಾಜ್ಯದ ಒಟ್ಟು 294 ವಿಧಾನಸಭಾ ಸ್ಥಾನಗಳಲ್ಲಿ 130-140 ಸ್ಥಾನಗಳನ್ನು ಗಳಿಸುತ್ತದೆ ಎಂದು ಅಂದಾಜಿಸಿದೆ. ಮ್ಯಾಟ್ರಿಜ್ ನಡೆಸಿದ ಸಮೀಕ್ಷೆಯ ಪ್ರಕಾರ, ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ 146-161 ಸ್ಥಾನಗಳೊಂದಿಗೆ ಗೆಲ್ಲಲಿದೆ, ಟಿಎಂಸಿ 1 25ರಿಂದ 140 ಸ್ಥಾನಗಳನ್ನು ಗೆಲ್ಲಲಿದೆ ಎಂದು ಅಂದಾಜಿಸಲಾಗಿದೆ.

**ಅಂತಾರಾಷ್ಟ್ರೀಯ ನೃತ್ಯ ದಿನದ ಆಚರಣೆ**

ನೃತ್ಯವು ಕೇವಲ ಮನರಂಜನೆಯ ಸಾಧನವಲ್ಲ, ಭಾವನೆಗಳನ್ನು ವ್ಯಕ್ತಪಡಿಸಲು, ಕಲೆ ಮತ್ತು ಸಂಸ್ಕೃತಿಯನ್ನು ಪ್ರದರ್ಶಿಸಲು ಇರುವ ಉತ್ತಮ ಮಾರ್ಗವಾಗಿದೆ. ಅಷ್ಟೇ ಅಲ್ಲದೆ ನೃತ್ಯ ಮಾಡುವುದರಿಂದ ಆರೋಗ್ಯ ಪ್ರಯೋಜನಗಳೂ ಲಭಿಸುತ್ತವೆ. ಆರೋಗ್ಯವಾಗಿರಲು ಉತ್ತಮ ಮಾರ್ಗವಾಗಿದೆ. ಹಾಗಾಗಿ ಡಾನ್ಸ್‌ನ ಪ್ರಯೋಜನ, ನೃತ್ಯ ಪ್ರಕಾರಗಳ ಬಗ್ಗೆ ಜನರಿಗೆ ತಿಳಿಸಲು, ನೃತ್ಯ ಕಲೆ ಹಾಗೂ ನೃತ್ಯಗಾರರಿಗೆ ಗೌರವವನ್ನು ಸಲ್ಲಿಸಲು ಪ್ರತಿವರ್ಷ ಏಪ್ರಿಲ್ 29 ರಂದು ಅಂತಾರಾಷ್ಟ್ರೀಯ ನೃತ್ಯ ದಿನವನ್ನು ಆಚರಿಸಲಾಗುತ್ತದೆ.

ಅಂತಾರಾಷ್ಟ್ರೀಯ ನೃತ್ಯ ದಿನದ ಇತಿಹಾಸವೇನು?

ಅಂತಾರಾಷ್ಟ್ರೀಯ ನೃತ್ಯ ದಿನಾಚರಣೆಯನ್ನು 1982 ರಲ್ಲಿ ಅಂತಾರಾಷ್ಟ್ರೀಯ ರಂಗಭೂಮಿ ಸಂಸ್ಥೆಯ (ಐಟಿಐ) ಅಂತಾರಾಷ್ಟ್ರೀಯ ನೃತ್ಯ ಸಮಿತಿಯು ಪ್ರಾರಂಭಿಸಿತು. ಐಟಿಐ ಒಂದು ಸರ್ಕಾರೇತರ ಸಂಸ್ಥೆಯಾಗಿದ್ದು, ಇದು ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆ (ಯುನೆಸ್ಕೋ)ಯ ಭಾಗವಾಗಿದೆ. ಅಂತಾರಾಷ್ಟ್ರೀಯ ನೃತ್ಯ ದಿನವನ್ನು ನೃತ್ಯ ಮಾಂತ್ರಿಕ ಜೀನ್ ಜಾರ್ಜಸ್ ನೊವೆರೆ ಅವರಿಗಾಗಿ ಸಮರ್ಪಿಸಲಾಗಿದೆ.

# ನಗರ ಜೆಡಿಎಸ್ ಅಧ್ಯಕ್ಷ ಟಿ.ಹೆಚ್. ಜಯರಾಂ ನೇಮಕ ಪಕ್ಷದ ಸಂಘಟನೆಗೆ ಹೆಚ್. ನಿಂಗಪ್ಪ ಮನವಿ



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ನಗರಸಭೆ ಮಾಜಿ ಅಧ್ಯಕ್ಷ ಟಿ.ಹೆಚ್. ಜಯರಾಮ್ ಅವರು ತುಮಕೂರು ನಗರ ಜೆಡಿಎಸ್ ಅಧ್ಯಕ್ಷರಾಗಿ ನೂತನವಾಗಿ ನೇಮಕವಾದರು.

ಗುರುವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಹೆಚ್. ನಿಂಗಪ್ಪ ಅವರು ಟಿ.ಹೆಚ್. ಜಯರಾಮ್‌ಅವರನ್ನು ನಗರ ಅಧ್ಯಕ್ಷರನ್ನಾಗಿ ನೇಮಕ ಮಾಡಿ, ನೇಮಕಾತಿ ಪತ್ರ ವಿತರಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಹೆಚ್.ನಿಂಗಪ್ಪ, ವಿವಿಧ ಘಟಕಗಳ ಪದಾಧಿಕಾರಿಗಳನ್ನು ಮುಂದಿನ ದಿನಗಳಲ್ಲಿ ನೇಮಕ ಮಾಡಲಾಗುವುದು. ಪಕ್ಷದಲ್ಲಿ ಹಲವಾರು ವರ್ಷಗಳಿಂದ ದುಡಿದ ಬಹಳಷ್ಟು ಹಿರಿಯರಿದ್ದಾರೆ. ಎಲ್ಲರಿಗೂಅಧಿಕಾರ ನೀಡಲು ಅವಕಾಶವಾಗುವುದಿಲ್ಲ. ಆದರೆ ನೇಮಕವಾದ ಪದಾಧಿಕಾರಿಗಳೊಂದಿಗೆ ಉಳಿದವರು ಸಹಕರಿಸಿ ಪಕ್ಷ ಸಂಘಟನೆಗೆ ಕಾಳಜಿವಹಿಸಬೇಕು ಎಂದು ಮನವಿ ಮಾಡಿದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಜೆಡಿಎಸ್ ಅನ್ನು ಬಲಪಡಿಸಿ ಅಧಿಕಾರ ಹಿಡಿಯಲು ಎಲ್ಲಾ ಮುಖಂಡರು, ಕಾರ್ಯಕರ್ತರು ಶ್ರಮಿಸಬೇಕು. ಮುಂದಿನ ವಿಧಾನಭಾ ಚುನಾವಣೆಯಲ್ಲಿ ಮೈತ್ರಿ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರಬೇಕು. ಹೆಚ್.ಡಿ . ಕುಮಾರಸ್ವಾಮಿಯವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬೇಕು ಎಂಬ ಕಾರ್ಯಕರ್ತರ ಅಪೇಕ್ಷೆ ಈಡೇರಲಿ ಎಂದು ಹೇಳಿದರು.

ನಗರ ಅಧ್ಯಕ್ಷರಾಗಿ ನೇಮಕವಾಗಿ ಟಿ.ಹೆಚ್. ಜಯರಾಮ್ ಮಾತನಾಡಿ, ಎಲ್ಲರೊಂದಿಗೆ ವಿಶ್ವಾಸದಿಂದ ಪಕ್ಷದ ಕೆಲಸಗಳಲ್ಲಿ ತೊಡಗುತ್ತೇನೆ. ತುಮಕೂರು ನಗರದ ಎಲ್ಲಾ ವಾರ್ಡ್‌ಗಳಲ್ಲಿ ಜೆಡಿಎಸ್ ಸಂಘಟನೆ ಮಾಡಿ, ಮುಂದಿನ ನಗರಪಾಲಿಕೆ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸೋಣ ಎಂದು ಹೇಳಿದರು.

ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಟಿ.ಆರ್. ನಾಗರಾಜು, ಮುಖಂಡರಾದ ಟಿ.ಎಲ್. ಕುಂಭಯ್ಯ, ಎಸ್. ಪುಟ್ಟೇರಪ್ಪ, ರಾಜ್ಯ ಹಿರಿಯ ಉಪಾಧ್ಯಕ್ಷ ಗಂಗಣ್ಣ, ರಾಜ್ಯ ಎಸ್ಟಿ ಘಟಕ ಕಾರ್ಯದರ್ಶಿ ಸೋಲಾರ್ ಕೃಷ್ಣಮೂರ್ತಿ, ನಿಕಟ ಪೂರ್ವ ನಗರ ಅಧ್ಯಕ್ಷ ವಿಜಯ್ ಗೌಡ, ನಗರಸಭೆ ಮಾಜಿ ಉಪಾಧ್ಯಕ್ಷ ಶ್ರೀನಿವಾಸ್ ಪ್ರಸಾದ್, ಮಾಜಿ ಸದಸ್ಯರಾದ ಟಿ.ಜಿ. ನರಸಿಂಹರಾಜು, ಟಿ.ಎ. ಬಾಲಕೃಷ್ಣ, ಮೋಹನ್ ಕುಮಾರ್, ಶ್ರೀನಿವಾಸ್, ಮುಖಂಡರಾದ ಯೋಗಾನಂದ ಕುಮಾರ್, ಟಿ.ಸಿ. ಪ್ರಭಾಕರ್, ಭೈರೇಶ್, ಉಪ್ಪಾರಹಳ್ಳಿ ಕುಮಾರ್, ಕೆಂಪರಾಜು, ಮಂಜುನಾಥ್, ಲೀಲಾವತಿ, ಲಕ್ಷ್ಮೀನಾಯಕ್, ರಾಧಾಎಲ್.ಗೌಡ ಮೊದಲಾದವರು ಹಾಜರಿದ್ದು ನೂತನ ಅಧ್ಯಕ್ಷ ಟಿ.ಹೆಚ್. ಜಯರಾಮ್ ಅವರನ್ನು ಅಭಿನಂದಿಸಿದರು.

# ವಿಶೇಷ ಚೇತನ ವಿದ್ಯಾರ್ಥಿಗಳಿಂದ ಡಿಪ್ಲೋಮಾ ಪ್ರವೇಶಾತಿಗೆ ಅರ್ಜಿ ಆಹ್ವಾನ

ತುಮಕೂರು:ಮೈಸೂರಿನ ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ವತಿಯಿಂದ 3 ವರ್ಷಗಳ ಅವಧಿಯ ವಿವಿಧ ಡಿಪ್ಲೊಮಾ ಕೋರ್ಸುಗಳ ಪ್ರವೇಶಕ್ಕೆ ಅರ್ಹ ವಿಕಲಚೇತನ ವಿದ್ಯಾರ್ಥಿ/ ವಿದ್ಯಾರ್ಥಿನಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್, ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ಇಂಜಿನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್(ಫಾರ್ ವಿಜ್ಯುವಲಿ ಇಂಪೇರ್ಡ್), ಅಪೆರಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ & ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ ಕೋರ್ಸುಗಳಿಗೆ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿಶೇಷ ಚೇತನ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರ ಮಟ್ಟದ ವಿದ್ಯಾರ್ಥಿ ವೇತನದ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್‌ನ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸಿಕೊಡಲಾಗುವುದು. ವಿದ್ಯಾರ್ಥಿ /ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿದ್ಯಾರ್ಥಿ ನಿಲಯದ ಸೌಲಭ್ಯ ಕಲ್ಪಿಸಲಾಗುವುದು.

ಅರ್ಹ ವಿದ್ಯಾರ್ಥಿಗಳು (ಸಾಮಾನ್ಯ ವರ್ಗದ ಅಭ್ಯರ್ಥಿಗಳು 200 ರೂ. ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ಪ್ರವರ್ಗ-1ಕ್ಕೆ ಸೇರಿದವರಿಗೆ 100 ರೂ.ಗಳ) ಮೈಸೂರಿನಲ್ಲಿ ಸಂದಾಯವಾಗುವಂತೆ ಪ್ರಾಂಶುಪಾಲರು, ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್, ಮೈಸೂರು-570006 ಇವರಿಗೆ ನಗದು ಅಥವಾ ಡಿಡಿಯನ್ನು ಕಳುಹಿಸಿ ಪ್ರವೇಶ ಅರ್ಜಿಗಳನ್ನು ಪಡೆಯಬಹುದು ಅಥವಾ ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಅಂಧತ್ವ (6/60 ಅಥವಾ 20/200 ಸ್ನೆಲೆನ್) ಹೊಂದಿರುವ ವಿಶೇಷ ಚೇತನರು, ಮೂಳೆ ಮತ್ತು ಕೀಲು ಅಂಗವಿಕಲತೆ(ಶೇ.40 ಮತ್ತು ಮೇಲ್ಪಟ್ಟ) ಹಾಗೂ ಕಿವುಡು ಮತ್ತು ಮೂಕ ಅಂಗವಿಕಲತೆ(60 ಡಿಬಿ ಮತ್ತು ಮೇಲ್ಪಟ್ಟ) ಹೊಂದಿದ್ದವರು ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ವೆಬ್‌ಸೈಟ್: www.jsspda.org / ಇ-ಮೇಲ್ ಅಥವಾ ದೂ.ವಾ.ಸಂ. 9844644937ನ್ನು ಸಂಪರ್ಕಿಸಬಹುದಾಗಿದೆ. ಭರ್ತಿ ಮಾಡಿದ ಅರ್ಜಿಯನ್ನು ಜೂನ್ 5ರೊಳಗೆ ಮೇಲ್ಕಂಡ ವಿಳಾಸಕ್ಕೆ ತಲುಪಿಸಬೇಕೆಂದು ಪ್ರಕಟಣೆ ತಿಳಿಸಿದೆ.

# ಮಾಧ್ಯಮಗಳಲ್ಲಿ ಸುಳ್ಳುಸುದ್ದಿಗಳ ಬಗ್ಗೆ ಜಾಗೃತಿವಹಿಸಿ ತಿಪಟೂರು ಕಾನಿಪ ಅಧ್ಯಕ್ಷ ದಯಾನಂದ.ಟಿ.ಎಸ್ ಸಲಹೆ



ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು: ಇತ್ತೀಚೆಗೆ ಸಾಮಾಜಿಕ ಜಾಲತಾಣಗಳ ಬಳಕೆ ಹೆಚ್ಚಾದಂತೆ ಸುಳ್ಳುಸುದ್ದಿಗಳ ಹರಡುವಿಕೆ ಕೂಡ ಅತಿಯಾಗುತ್ತಿದ್ದು, ಅಂತಹ ಸುಳ್ಳುಸುದ್ದಿಗಳಿಂದ ದೊಡ್ಡ ದೊಡ್ಡ ಕಲಹಗಳು ಉಂಟಾಗಿರುವ ನಿದರ್ಶನಗಳು ನಮ್ಮ ಮುಂದಿವೆ. ಆದ್ದರಿಂದ ವಿದ್ಯಾರ್ಥಿಗಳು ಫೇಕ್ ನ್ಯೂಸ್ ಕುರಿತು ಜಾಗೃತರಾಗಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ತಿಪಟೂರು ಅಧ್ಯಕ್ಷ ದಯಾನಂದ್.ಟಿ.ಎಸ್ ತಿಳಿಸಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತಿಪಟೂರು, ಪತ್ರಿಕೋದ್ಯಮ ವಿಭಾಗ ಹಾಗೂ ಈ ದಿನ ಡಾಟ್ ಕಾಮ್ ಇವರ ಸಹಯೋಗದಲ್ಲಿ ಪ್ರಸ್ತುತ ವಿದ್ಯಮಾನಗಳಲ್ಲಿ ಡಿಜಿಟಲ್ ಮಾಧ್ಯಮಗಳ ಪಾತ್ರ? ಎಂಬ ವಿಷಯದ ಕುರಿತು ಎಪಿಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ಗುರುವಾರ ನಡೆದ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅವರು, ಸಾಮಾಜಿಕ ಜಾಲತಾಣಗಳಲ್ಲಿ ಬರುವ ಎಲ್ಲವನ್ನು ನಂಬಬೇಡಿ, ಆದಷ್ಟು ಪತ್ರಿಕೆಗಳನ್ನು ಓದುತ್ತಾ ವಿಷಯದ ಸತ್ಯಾಸತ್ಯತೆಯನ್ನು ಪರೀಕ್ಷೆ ಮಾಡಿ ನೋಡಿ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಭಾಗವಹಿಸಿದ್ದ ಈ ದಿನ ಡಾಟ್ ಕಾಮ್ ತುಮಕೂರು ಜಿಲ್ಲಾ ವರದಿಗಾರರಾದ ಚಂದನ್.ಡಿ.ಎನ್ ಮಾತನಾಡಿ, ಈ ದಿನ ಡಾಟ್ ಕಾಮ್ ಎಂಬುದು ಆನ್ಲೈನ್ ಮಾಧ್ಯಮವಾಗಿ ಯಾವ ರೀತಿಯಲ್ಲಿ ಬೆಳೆಯುತ್ತಿದೆ, 11 ಲಕ್ಷ ಜನರನ್ನ ತಲುಪಿದ್ದು ಹೇಗೆ, ಈ ದಿನ ಡಾಟ್ ಕಾಮ್ ಪ್ರಸ್ತುತಿಗೆ ಬರಲು ಕಾರಣ ಏನು, ಯಾವ ರೀತಿಯಲ್ಲಿ ನಾಗರಿಕ ಸಮಾಜವು ಇದರ ಅಂಗವಾಗಿ ಕಾರ್ಯ ನಿರ್ವಹಿಸಬಹುದು ಎಂದೆಲ್ಲ ಸರಳವಾಗಿ ವಿವರಿಸಿದರು.

ಕರ್ನಾಟಕದಲ್ಲಿ ಹೊಸ ರೀತಿಯ ಮಾಧ್ಯಮವನ್ನು ಕಟ್ಟಬೇಕು ಎಂದುಕೊಂಡು ಈ ದಿನ ಡಾಟ್ ಕಾಮ್ ರೂಪಿಸಲಾಗಿದ್ದು, ಪತ್ರಿಕೋದ್ಯಮದಲ್ಲಿ ಓದುವ ವಿದ್ಯಾರ್ಥಿಗಳೇ ಅಂತೇನಿಲ್ಲ, ಸಾಮಾನ್ಯ ನಾಗರಿಕರು ಕೂಡ ನಾಗರಿಕ ಪತ್ರಕರ್ತರಾಗಿ ನಮ್ಮೊಂದಿಗೆ ಕೆಲಸ ಮಾಡಬಹುದು. ಈ ಡಿಜಿಟಲ್ ಮೀಡಿಯಾದ ವಿಶೇಷತೆಯೇ ವಿಶ್ವದ ಯಾವುದೇ ಮೂಲೆಯಲ್ಲಿ ಬೇಕಾದರು ಕುಳಿತು ಕ್ಷಣ ಮಾತ್ರದಲ್ಲಿ ಸುದ್ದಿ ಓದಬಹುದು, ನೋಡಬಹುದು ಹಾಗೂ ಸ್ವತಃ ನೀವೇ ಬರೆಯಬಹುದು ಕೂಡ ನೀಡಬಹುದು ಎಂದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಶಶಿಕುಮಾರ್. ಎಚ್.ಸಿ ಮಾತನಾಡಿ, ವಿದ್ಯಾರ್ಥಿಗಳ ಮೊಬೈಲ್ ಬಳಕೆಯಲ್ಲಿ ಮುಳುಗಿ, ಸತ್ಯ ಸುಳ್ಳುಗಳ ಅರಿವಿರದೇ ಫೇಕ್ ನ್ಯೂಸ್ ಗಳಿಗೆ ಬಲಿಪಶುಗಳಾಗುತ್ತಿದ್ದು, ಡಿಜಿಟಲ್ ಮಾಧ್ಯಮವನ್ನು ಅತ್ಯಂತ ಎಚ್ಚರಿಕೆಯಿಂದ ಉಪಯೋಗಿಸಿ ಮತ್ತು ಡಿಜಿಟಲ್ ಮೀಡಿಯಾ ಕುರಿತ ಈ ಕಾರ್ಯಾಗಾರವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ತುಮಕೂರಿನ ಸಿದ್ಧಾರ್ಥ್ ಮಾಧ್ಯಮ ಅಧ್ಯಯನ ಕೇಂದ್ರ ಆಯೋಜಿಸಿದ್ದ ಸಂಭ್ರಮ ಮಾಧ್ಯಮ ಹಬ್ಬದಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ಇತಿಹಾಸ ವಿಭಾಗದ ಮುಖ್ಯಸ್ಥರಾದ ಶಿವಕುಮಾರ್.ಸಿ.ಜಿ, ಪ್ರಜಾಪ್ರಗತಿ ಉಪಸಂಪಾದಕ ದರ್ಶನ್, ಪತ್ರಿಕೋದ್ಯಮ ವಿಭಾಗದ ಉಪನ್ಯಾಸಕರಾದ ದೇವರಾಜ್.ಸಿ, ಹಣಮಂತ ಕಾಂಬಳೆ, ಸಮಾಜ ಕಾರ್ಯ ವಿಭಾಗದ ಗಂಗಾಧರ್ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಂಬೇಡ್ಕರ್ ಜಯಂತಿ ಒಂದು ಜನಾಂಗಕ್ಕೆ ಸೀಮಿತವಾಗಬಾರದು ಬಿದಲೋಟಿ ರಂಗನಾಥ್

ಮಧುಗಿರಿ: ವಿದ್ವತ್ತಿನ ಮೇರುವ ಪರ್ವತ, ಅಂಬೇಡ್ಕರ್ ದಿನಾಚಾರಣೆ ಬೆಲ್ಲದ ಮಡು ಗ್ರಾಮದಲ್ಲಿ ಮಾಡುತ್ತಿರುವುದು ಸಂತೋಷ ತಂದಿದೆ.ಆದರೆ ಅಂಬೇಡ್ಕರ್ ಸೀಮಿತ ಜನಾಂಗದ ನಾಯಕರಲ್ಲ ಅವರು ವಿಶ್ವನಾಯಕ ಎಂಬ ತಿಳುವಳಿಕೆ ಎಲ್ಲಾ ಜನರಲ್ಲೂ ಬರಬೇಕಿದೆ. ಇಂತಹ ಮಹಾತ್ಮನ ಜಯಂತಿಯನ್ನು ಎಲ್ಲಾ ಜನಾಂಗದವರೂ ಸೇರಿ ಆಚರಿಸುವಂತಾಗಲಿ . ಅಂಬೇಡ್ಕರ್ ಸಂವಿಧಾನವನ್ನು ಎಲ್ಲಾ ಜನಾಂಗದವರಿಗೂ ಕೊಟ್ಟಿದ್ದಾರೆ ಎಂಬುದನ್ನು ಮರೆಯಬಾರದು. ಈ ಗ್ರಾಮದಂತೆಪ್ರತಿ ಹಳ್ಳಿಗಳಲ್ಲೂ ಅಂಬೇಡ್ಕರ್ ಜಯಂತಿ ಆಚರಿಸುವ

ಮೂಲಕ ಅವರ ಆಶಯಗಳನ್ನು ಪ್ರತಿಹಳ್ಳಿಗೂ ಕೊಂಡ್ಯೊಯ್ಯುವಲ್ಲಿ ಯಶಸ್ವಿಗೊಳಿಸಬೇಕಿದೆ. ಎಂದು ಸಾಹಿತಿ ಬಿದಲೋಟಿ ರಂಗನಾಥ್ ಅಭಿಪ್ರಾಯಪಟ್ಟರು. ಅವರು ಮಧುಗಿರಿ ತಾಲ್ಲೋಕಿನ ಬೆಲ್ಲದ ಮಡು ಗ್ರಾಮದಲ್ಲಿ ರಂಗಶಾಮಯ್ಯ ಬೆಲ್ಲದಮಡು ಯುವಕರ ಸಂಘದ ವತಿಯಿಂದ ಅಯೋಜಿಸಿದ್ದ 135ನೇ ಅಂಬೇಡ್ಕರ್ ಜಯಂತಿ ಹಾಗೂ ಬಾಬು ಜಗಜೀವನ್ ಜಯಂತಿ ಕಾರ್ಯಕ್ರಮವನ್ನು ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಇವತ್ತಿಗೂ ಕೆಲವು ಕಡೆ ಅಸ್ಪೃಶ್ಯತೆ ಜೀವಂತವಾಗಿದೆ. ಅಷ್ಟೇ ಯಾಕೆ ಅಸ್ಪೃಶ್ಯರಿಗೆ ನಗರಗಳಲ್ಲಿ ಇವತ್ತಿಗೂ ಬಾಡಿಗೆ ದೊರೆಯುತ್ತಿಲ್ಲ. ಇದು ನೋವಿನ ಸಂಗತಿ. ಇದರ ಬಿಡುಗಡೆಗೆ ನಾವು ಶೈಕ್ಷಣಿಕವಾಗಿ ಹಾಗೂ



ಆರ್ಥಿಕವಾಗಿ ಬಲಿಷ್ಠರಾಗಬೇಕಿದೆ. ಜೊತೆಗೆ ರಾಜಕೀಯ ಚುಕ್ಕಾಣಿಯನ್ನು ಹಿಡಿಯುವ ಮೂಲಕ ಜನಾಂಗದ ಬದಲಾವಣೆಗೆ ದಾರಿದೀಪವಾಗಬೇಕಿದೆ. ಕಾನೂನು ಎಷ್ಟೇ ರಕ್ಷಣೆಗಿದ್ದರೂ ಮಾನವೀಯತೆ ಮುಖ್ಯ. ಒಳಮೀಸಲಾತಿ ತೃಪ್ತಿ ತಂದಿಲ್ಲ ಸಮಾಧಾನವಷ್ಟೇ ಎಂದರು

ಡಾ.ಮುರುಳಿಧರ್ ಮಾನಾಡಿ ಸಮಸಮಾಜ ಕಟ್ಟುವಲ್ಲಿನಾವು ಶ್ರಮಿಸಬೇಕಿದೆ. ಮೀಸಲಾತಿಯಿಂದಲೇ ದೊಡ್ಡ ಹುದ್ದೆಗಳನ್ನ ನಾವು ಅಲಂಕರಿಸಿರುವುದು, ಸಂವಿಧಾನ ತಿದ್ದುವ ಪಕ್ಷದಿಂದ ದೂರವಿರಿ ಎಂದರು. ದಲಿತ ಸಂಘರ್ಷ ಸಮಿತಿ ರಾಜ್ಯ ಪ್ರಧಾನ ಕಾರ್ಯದರ್ಶಿ ಬೆಲ್ಲದ ಮಡು ಕೃಷ್ಣಪ್ಪ ಮಾತನಾಡಿ ಜಾತಿಯತೆ ಇಂದಿಗೂ ಜೀವಂತವಾಗಿದೆ ಅದು ಮೊದಲು ತೊಲಗಬೇಕಿದೆ. ಜನಸಂಖ್ಯೆ ಆಧರಿಸಿ ಮೀಸಲಾತಿ ನೀಡಬೇಕಿತ್ತು. ಹೋರಾಟದ ಬೆಳಕು ಬೆಳಕು ರಂಗಶಾಮಣ್ಣ ಹುಟ್ಟಿದ ನೆಲದಲ್ಲಿ ಅಂಬೇಡ್ಕರ್ ಭವನ ವಿಲ್ಲದ್ದು ನೋವಿನ ಸಂಗತಿ ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಿಬೇಕಿದೆ. ಯುವಕರು ದುಶ್ಚಟಗಳಿಗೆ ಬಲಿಯಾಗದಿರಿ.ಹೆಂಡಖಂಡಕ್ಕೆ ಓಟನ್ನು ಮಾರಿಕೊಳ್ಳದೆ ಒಳ್ಳೆ ಪ್ರತಿನಿಧಿಯನ್ನು ಆಯ್ಕೆ ಮಾಡಿಕಳ್ಳಿ ಎಂದರು

ಕಾರ್ಯಕ್ರಮದಲ್ಲಿ ಡಿ ಜಯಂತ್ ಕುಮಾರ್, ಚಂದ್ರಣ್ಣ, ಡಿಎಸ್‌ಎಸ್ ತಾಲೂಕ ಅಧ್ಯಕ್ಷ ರವಿಕುಮಾರ್, ನಿವೃತ್ತ ಯೋಜನಾಧಿಕಾರಿ ಬಾಲರಾಜು, ನಾನಕ್ ಚಂದ್ರತ್ತು, ಜಯಲಕ್ಷ್ಮಮ್ಮ ಲಕ್ಷ್ಮಮ್ಮ ಚಂದ್ರಣ್ಣ, ಕುಮಾರ್ ಶ್ರೀ ಬಿ.ಎಂ. ಮಂಜುನಾಥ್ ಕಾರ್ತಿಕ್. ಅಡವೀಶಯ್ಯ ಇತರರು ಇದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ರಾಮನಗರ ಸುದ್ದಿ ಕಾರ್ನರ್

## ಸಾಮುದಾಯಿಕ ಜೀವನ ಶಿಬಿರದಿಂದ ನಾಯಕತ್ವ ಗುಣ

### ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ 3 ದಿನಗಳ ಶಿಬಿರ ಯಶಸ್ವಿ

ಸೂರ್ಯಪ್ರಗತಿನ್ಯೂಸ್.ಕಾಂ




ರಾಮನಗರ : ವ್ಯಕ್ತಿತ್ವ ವಿಕಸನಗೊಳ್ಳಲು ನಾಯಕತ್ವದ ಗುಣ ಮೈಗೂಡಿಸಿಕೊಳ್ಳಲು ಸಾಮುದಾಯಿಕ ಜೀವನ ಶಿಬಿರ ಉತ್ತಮ ವೇದಿಕೆಯಾಗಿದ್ದು, ಈ ಶಿಬಿರವು ಬದುಕಿನ ಶಿಕ್ಷಣದ ' ಜೊತೆಗೆ ತಾಳ್ಮೆ, ಸಹನೆ, ಹೊಂದಾಣಿಕೆ ಹಾಗೂ ನಾಯಕತ್ವದ ಗುಣಗಳನ್ನು ಕಲಿಸಿದೆ ಎಂದು ರಾಜಾಜಿನಗರ ಶಿಕ್ಷಣ ಮಹಾವಿದ್ಯಾಲಯ ಸಂಸ್ಥೆಯ ಉಪಾಧ್ಯಕ್ಷ ಶ್ರೀಕಾಂತ್ ತಿಳಿಸಿದರು.

ಇಲ್ಲಿನ ಜಾನಪದ ಲೋಕದಲ್ಲಿ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ರಾಜಾಜಿನಗರ ಶಿಕ್ಷಣ ಮಹಾವಿದ್ಯಾಲಯದಿಂದ 3 ದಿನ ನಡೆದ ಸಾಮುದಾಯಿಕ ಜೀವನ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. ಕಾಲೇಜಿನಲ್ಲಿ ಒಂದೆಡೆ ಕುಳಿತರೆ, ಜ್ಞಾನಾರ್ಜನೆ ಆಗುವುದಿಲ್ಲ. ಪ್ರಶಿಕ್ಷಣಾರ್ಥಿಗಳು ಇಂತಹ ಶಿಬಿರಗಳಲ್ಲಿ ಭಾಗವಹಿಸಬೇಕು. ಇದರಿಂದ ನಾಯಕತ್ವ ಗುಣ, ಏಕಾಗ್ರತೆ ಜತೆಗೆ ಜಾಗೃತಿ ಮೂಡಲಿದೆ ಎಂದರು.

ಶಿಬಿರಗಳಿಂದ ಪ್ರಶಿಕ್ಷಣಾರ್ಥಿಗಳಿಗೆ ಸಾಮಾಜಿಕ ಆರ್ಥಿಕ ಹಾಗೂ ನಾನಾ ಕ್ಷೇತ್ರಗಳಲ್ಲಿನ ವಿಚಾರಗಳನ್ನು ತಿಳಿದುಕೊಳ್ಳಲು ಉತ್ತಮ ಅವಕಾಶವಿರುತ್ತದೆ. ಸಾಮುದಾಯಿಕ ಜೀವನ ಶಿಬಿರಗಳು ಪ್ರಶಿಕ್ಷಣಾರ್ಥಿಗಳಿಗೆ ಜವಾಬ್ದಾರಿಯುತ ನಾಗರಿಕರಾಗಲು ಅಗತ್ಯವಾದ ನಾಯಕತ್ವ ಗುಣವನ್ನು ಬೆಳೆಸುತ್ತದೆ. ಸಮಾಜದಲ್ಲಿ ಪ್ರತಿಯೊಬ್ಬರೂ ಆದರ್ಶ, ಮೌಲ್ಯಗಳನ್ನು ಇಟ್ಟುಕೊಳ್ಳಬೇಕು. ಹಾಗಾದಲ್ಲಿ ಮಾತ್ರ ಉತ್ತಮ ಪ್ರಜೆಗಳನ್ನ ರೂಪಿಸುವ ಶಕ್ತಿ ಸಂಪಾದಿಸುತ್ತಾರೆ. ಈ ನಿಟ್ಟಿನಲ್ಲಿ ಇಂತಹ ಶಿಬಿರಗಳು ಪ್ರಶಿಕ್ಷಣಾರ್ಥಿಗಳಿಗೆ ಅವಶ್ಯವಾಗಿದೆ ಎಂದು ಹೇಳಿದರು.

ತಾಲ್ಲೂಕು ತಿಗಳರ ಸಮಾಜದ ಅಧ್ಯಕ್ಷ, ಕಾಂಗ್ರೆಸ್ ಮುಖಂಡ ಗುರುವೇಗೌಡ ಮಾತನಾಡಿ, ಜೀವನದಲ್ಲಿ ಕಲಿಕೆ ಎಂಬುದು ನಿರಂತರ. ಶ್ರದ್ಧೆ, ವಿನಯ ತಾಳ್ಮೆ ಇದ್ದಲ್ಲಿ ಮಾತ್ರ ಜ್ಞಾನಾರ್ಜನೆಯ ಸವಿಯನ್ನ ಸವಿಯಲು ಸಾಧ್ಯ. ಭವಿಷ್ಯದ ಸತ್ಪ್ರಜೆಗಳನ್ನ ರೂಪಿಸುವ ಹೊಣೆಗಾರಿಕೆ ನಿಮ್ಮ ಮೇಲಿದೆ. ಮುಂದಿನ ಭಾವಿ ಶಿಕ್ಷಕರಾಗುವ ನೀವು ಮಕ್ಕಳಲ್ಲಿ ಶಿಸ್ತು, ಸೇವಾಮನೋಭಾವನೆಯನ್ನು ಮೂಡಿಸಲು ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ರಾಜಾಜಿನಗರ ಶಿಕ್ಷಣ ಮಹಾವಿದ್ಯಾಲಯ ಸಂಸ್ಥೆಯ ಗೌರವಾಧ್ಯಕ್ಷ ಎ.ಎಚ್.ಬಸವರಾಜು, ಪ್ರಾಂಶುಪಾಲರಾದ ಡಾ.ಶಿವರಾಮಯ್ಯ, ಯೋಗೇಶ್, ಮುಖಂಡರಾದ ಗುರುರಾಜ್, ಕೃಷ್ಣಪ್ಪ, ನಾಗರಾಜು, ಲಕ್ಷ್ಮಣ್ ಹಾಗೂ ಸಂಸ್ಥೆಯ ಪದಾಧಿಕಾರಿಗಳು ಸೇರಿದಂತೆ ಹಲವರಿದ್ದರು.

## ಸ್ವದೇಶಿ ಉತ್ಪನ್ನಗಳಿಗೆ ಪ್ರೋತ್ಸಾಹಿಸಿ: ಸಂತೋಷ್ ನಾಗವಾರ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ : ದೇಶದ ಅಭಿವೃದ್ಧಿಗೆ ಸ್ವದೇಶಿ ಉತ್ಪನ್ನಗಳನ್ನು ಬಳಕೆ ಮಾಡುವ ಮೂಲಕ ಸಾರ್ವಜನಿಕರು ಸಹಕರಿಸಬೇಕು ಎಂದು ಗ್ರೀಮ್ ಡೀಲ್ ಗ್ರೂಪ್ ಜಿಲ್ಲಾ ಶಾಖಾ ನಿರ್ದೇಶಕ ಸಂತೋಷ್ ನಾಗವಾರ ಮನವಿ ಮಾಡಿದರು. ನಗರದ ರಾಯರ ದೊಡ್ಡ ವೃತ್ತದಲ್ಲಿ ಸಂಸ್ಥೆಯ ಕಚೇರಿಯಲ್ಲಿ ಸಂಸ್ಥೆ ಮಾಲಿಕ ಮಹಮದ್ ಸುಹೇಲ್ ಅವರ ಜನ್ಮದಿನದ ಅಂಗವಾಗಿ ಜೀವಾಮೃತ ರಕ್ತನಿಧಿ ಚನ್ನಪಟ್ಟಣ ವತಿಂದ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಉದ್ಘಾಟನೆ ಹಾಗೂ ಮಡಿಲು ಚಾರಿಟಬಲ್ ಟ್ರಸ್ಟಿನ ಆಸರೆ ವೃದ್ಧಾಶ್ರಮದಲ್ಲಿ ಆಸರೆ ಪಡೆದಿರುವ ನಿರಾಶ್ರಿತರಿಗೆ ಆಹಾರ ಪದಾರ್ಥಗಳನ್ನು ವಿತರಿಸಿ ಮಾತನಾಡಿದ ಅವರು, ಸಂಸ್ಥೆಯು ರಾಮನಗರ, ಮಂಡ್ಯ ವ್ಯಾಪ್ತಿಯಲ್ಲಿ 50 ಸಾವಿರಕ್ಕೂ ಅಧಿಕ ಗ್ರಾಹಕರಿಗೆ ಸ್ವದೇಶಿ ಉತ್ಪನ್ನಗಳನ್ನು ಅತ್ಯಂತ ಕಡಿಮೆ ಬೆಲೆಯಲ್ಲಿ ವಿತರಣೆ ಮಾಡಿದೆ ಎಂದರು. ಗ್ರಾಮೀಣ ಭಾಗದ ಜನರು ಒಂದೇ ಬಾರಿಗೆ ಹೆಚ್ಚು ಹಣವನ್ನು ಹೂಡಿಕೆ ಮಾಡಿ ಮನೆಗೆ ಬೇಕಾದ ಎಲೆಕ್ಟ್ರಾನಿಕ್ ಉಪಕರಣ ಮತ್ತಿತರ ವಸ್ತುಗಳನ್ನು ಖರೀದಿ ಮಾಡಲು ಸಾಧ್ಯವಾಗುವುದಿಲ್ಲ. ಇಂತಹ ಸಂದರ್ಭದಲ್ಲಿ ತಿಂಗಳ ಕಂತಿನಲ್ಲಿ ಹಣ ಕಟ್ಟಿಸಿಕೊಂಡು ಸ್ವದೇಶಿ ಉತ್ಪನ್ನಗಳನ್ನು ಮಾರಾಟ ಮಾಡಲಾಗುತ್ತಿದೆ ಈಗಾಗಲೇ ಡೀಮ್ ಡೀಲ್ ಉತ್ಪನ್ನಗಳಿಗೆ ಗ್ರಾಹಕರು ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

## ಇಂದು ಭಗವಾನ್ ಬುದ್ಧ ಜಯಂತಿ

ರಾಮನಗರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನು ಮೇ 01ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಏರ್ಪಡಿಸಲಾಗಿದೆ. ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಸಮುದಾಯದ ಅಧ್ಯಕ್ಷರು, ಕಾರ್ಯದರ್ಶಿಗಳು, ಮುಖಂಡರು, ಎಲ್ಲಾ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿಗಳು ಕಡ್ಡಾಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ. ಸತೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ 2 ಕ್ಕೆ ಝೃುನ್ ಟೀಮ್ ನ 'ಪಂಚವರ್ಣೆ' ನಾಟಕ



ತುಮಕೂರಿನ ಝೃುನ್ ಟೀಮ್ ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಕಾರ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದೊಂದಿಗೆ ಮೇ 2 ರಂದು ಶನಿವಾರ ಸಂಜೆ 6.45 ಕ್ಕೆ ಅಮಾನಿ ಕೆರೆ ಮುಂಭಾಗದಲ್ಲಿರುವ ಕನ್ನಡ ಭವನದಲ್ಲಿ ಡಾ. ಮೀರಾ ಹೆಚ್. ಎನ್. ಅಭಿನಯದ 'ಪಂಚವರ್ಣೆ' ಎಂಬ ಏಕವ್ಯಕ್ತಿ ರಂಗ ಪ್ರಯೋಗ ಹಮ್ಮಿಕೊಳ್ಳಲಾಗಿದೆ ಎಂದು ಝೃುನ್ ಟೀಮ್ ನ ಉಗಮ ಶ್ರೀನಿವಾಸ್ ತಿಳಿಸಿದ್ದಾರೆ. ನಾಟಕದ ರಚನೆ, ವಿನ್ಯಾಸ ಹಾಗೂ ನಿರ್ದೇಶನ ಬೇಲೂರು ರಘುನಂದನ್ ಅವರದ್ದು. ನಾಟಕ ಪ್ರದರ್ಶನಕ್ಕೆ ಆಗ್ರೋ ಇಂಜಿನಿಯರಿಂಗ್ ಅಂಡ್ ರೂರಲ್ ಇಂಡಸ್ಟ್ರೀಸ್ ಸಹ ಅಧ್ಯಕ್ಷ ಸದಾಶಿವ ಆರ್. ಅಮಿನ್ ಚಾಲನೆ ನೀಡಲಿದ್ದಾರೆ. ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ವಹಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಮಿರ್ಜಿ, ವಿಶ್ರಾಂತ ಪ್ರಾಚಾರ್ಯರಾದ ಪ್ರಭಾವತಿ, ಛಾಯಾಗ್ರಾಹಕ ಟಿ.ಹೆಚ್. ಸುರೇಶ್ ಆಗಮಿಸಲಿದ್ದಾರೆ. ನಾಟಕಕ್ಕೆ ಉಚಿತ ಪ್ರವೇಶವಿದೆ. ತುಮಕೂರಿನವರಾದ ಮೀರಾ ಅವರು ಟಿ.ಎನ್. ಸೀತಾರಾಮ್ ಅವರ ನಿರ್ದೇಶನದ ಮುಕ್ತ, ಮನ್ವಂತರ, ಮಿಂಚು, ಮಗಳು ಜಾನಕಿ ಸೇರಿದಂತೆ ಹಲವಾರು ಧಾರಾವಾಹಿಗಳಲ್ಲಿ ಅಭಿನಯಿಸಿದ್ದಾರೆ. ಕುಸುಮಬಾಲೆ ಹಾಗೂ ಗೊರವನಹಳ್ಳಿ ಲಕ್ಷ್ಮಿ ಮಹಾತ್ಮೆ ಡಾಕ್ಯುಮೆಂಟರಿಯಲ್ಲಿ ನಟಿಸಿದ್ದಾರೆ. ಅಲ್ಲದೆ 13 ವರ್ಷ ಕೂಚುಪುಡಿ ನೃತ್ಯಾಭ್ಯಾಸ ಮಾಡಿ ಅನೇಕ ಸ್ಥಳಗಳಲ್ಲಿ ಪ್ರದರ್ಶನ ನೀಡಿದ್ದಾರೆ.

## ಹಸ್ತ ಪ್ರತಿಗಳ ಸಂರಕ್ಷಣೆ, ಡಿಜಿಟಲೀಕರಣ

### ಕಾರ್ಯ ಯೋಜನೆಗೆ ಸಹಕರಿಸಲು ಅಪರ ಜಿಲ್ಲಾಧಿಕಾರಿ ಸೂಚನೆ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ, ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಇಡೀ ದೇಶದಲ್ಲಿರುವ ಹಸ್ತಪ್ರತಿಗಳ ಮಾಹಿತಿಯನ್ನು ಕೇಂದ್ರ ಸರ್ಕಾರವು ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್‌ನಲ್ಲಿ ಅಪ್ಲೋಡ್ ಮಾಡುವ ಮೂಲಕ ಸಂಗ್ರಹಣೆಗೊಳ್ಳುವ ರಾಷ್ಟ್ರೀಯ ಭಂಡಾರವು (National Reposi tory) ದತ್ತಾಂಶದ ಮಾಹಿತಿಯನ್ನು ವಿಶ್ವಕ್ಕೆ ಹಂಚಿಕೊಳ್ಳುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ತಿಳಿಸಿದರು.

ಅವರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಹಸ್ತ ಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕಾರ್ಯ ಯೋಜನೆ ಕುರಿತು ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ರಾಷ್ಟ್ರದಾದ್ಯಂತ ಶತಮಾನಗಳಷ್ಟು ಹಳೆಯ ಕೈಬರಹ ಪತ್ರಗಳು, ಹಸ್ತ ಪ್ರತಿಗಳು ಮತ್ತು ದಾಖಲೆಗಳ ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಇವುಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಮತ್ತು ಪ್ರಕಟಣೆಯನ್ನು ಮಾಡುವ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಸಾರ್ವಜನಿಕ ಪ್ರವೇಶವನ್ನು ಒದಗಿಸಿ ಭವಿಷ್ಯದ ಪೀಳಿಗೆಗೆ ಅವುಗಳ ಜ್ಞಾನ ಸಂಪತ್ತಿನ ಸಂರಕ್ಷಣೆ ಮತ್ತು ಬಳಕೆಗೆ ಹಸ್ತಪ್ರತಿಗಳ ಸಂರಕ್ಷಣೆ ಹಾಗೂ ಡಿಜಿಟಲೀಕರಣ ಯೋಜನೆಯನ್ನು ಹಮ್ಮಿಕೊಂಡಿದೆ ಎಂದರು.

ಈ ಯೋಜನೆಗೆ ಸಂಬಂಧಿಸಿದಂತೆ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ವತಿಯಿಂದ ಹಾಜರಿದ್ದ ಸಿಬ್ಬಂದಿಗಳಿಗೆ ಹಸ್ತ ಪ್ರತಿಗಳನ್ನು ಪತ್ತೆ ಹಚ್ಚಲು ಹಾಗೂ ತಮ್ಮ ಸಂಸ್ಥೆಯಲ್ಲಿ ಯಾವುದೇ ದಾಖಲೆಗಳು ಇದ್ದರೆ ಮಾಹಿತಿ ನೀಡಲು ಸೂಚಿಸಿದರು. ಈ ಸಂಬಂಧ ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಪ್ರತಿನಿಧಿಯಾದ ಪ್ರೇಮಪುರಿ ಶಿವಂ ಅವರು ಮಾತನಾಡುತ್ತಾ ನಮ್ಮ ಬಳಿ ಕೆಲವು ಹಸ್ತ ಪ್ರತಿಗಳು ಇರಬಹುದು ಇದರ ಬಗ್ಗೆ ಕೂಡಲೇ ಪರಿಶೀಲಿಸಿ ಮಾಹಿತಿಯನ್ನು ಪ್ರವಾಸೋದ್ಯಮ ಇಲಾಖೆಗೆ ತಿಳಿಸಲಾಗುದು ಎಂದು ಮಾಹಿತಿ ನೀಡಿದರು.

ಆಡಳಿತ ಅಧಿಕಾರಿಗಳು ಚುಂಚನಗಿರಿ ಮಠ ರಾಮನಗರ ಹಾಗೂ ದೇಗುಲ ಮಠ ಕನಕಪುರ ಅವರು ತಮ್ಮ ಬಳಿ ಯಾವುದೇ ರೀತಿಯ ಹಸ್ತ ಪ್ರತಿಗಳು ಇರುವುದಿಲ್ಲ ಎಂದು ಸಭೆಗೆ ಮಾಹಿತಿ ನೀಡಿದರು ಹಾಗೂ ಚುಂಚನಗಿರಿ ಮಠದವರು ಹಸ್ತ ಪ್ರತಿಗಳನ್ನು ಮಂಡ್ಯ ಜಿಲ್ಲೆಯ ಆದಿ ಚುಂಚನಗಿರಿ ಮಠದಲ್ಲಿ ಸಂಗ್ರಹಿಸಲಾಗಿದೆ ಎಂದು ತಿಳಿಸಿದಾಗ ಅಪರ ಜಿಲ್ಲಾಧಿಕಾರಿಗಳು ಯಾವುದಾದರೂ ಹಸ್ತ ಪ್ರತಿಗಳು ಲಭ್ಯವಾದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಮಾತನಾಡಿ, ಜಿಲ್ಲೆಯಲ್ಲಿ ಮರಳೆ ಗವಿ ಮಠ, ದೇಗುಲ ಮಠ, ಅಬ್ಬೂರು ಮಠ, ವಾದಿರಾಜರ ಮಠ, ಅಪ್ರಮೇಯ ದೇವಾಲಯ, ಹಳೆ ಬ್ರಾಹ್ಮಣರ (ಪುರೋಹಿತರ) ಮನೆಗಳು, ಹಳೇ ದೇವಾಲಯಗಳಲ್ಲಿ ಹಸ್ತ ಪ್ರತಿಗಳು ಲಭ್ಯವಿರುವ ಬಗ್ಗೆ ಪರಿಶೀಲಿಸಬೇಕು ಎಂದು ತಿಳಿಸಿದರು. ಜಾನಪದ ಲೋಕದ ಕ್ಯೂರೇಟರ್ ಅವರು ಮಾತನಾಡಿ, ಜಾನಪದ ಲೋಕದಲ್ಲಿ 150 ಹೆಚ್ಚು ತಾಳೆಗರಿ ಹಸ್ತಪ್ರತಿಗಳು, 5 ಕಡತಗಳು, ಜಾನಪದ ಲೋಕದ ನಿರ್ಮಾತೃ ನಿವೃತ ಐ.ಎ.ಎಸ್ ಅಧಿಕಾರಿ ನಾಗೇಗೌಡ ಎಚ್. ಎನ್ ಅವರ ಕೈಬರಹದ 12 ದಿನಚರಿ ಡೈರಿಗಳು, ಭೂಮಿಗೆ ಬಂದ ಗಂಧರ್ವ, ಸೋಬಾನೆ ಚಿಕ್ಕಮ್ಮನ ಪದಗಳು, ಪ್ರವಾಸಿ ಕಂಡ ಇಂಡಿಯಾ, ದೊಡ್ಡ ಮನೆ ಪುಸ್ತಕಗಳು ಲಭ್ಯವಿದೆ ಎಂದು ಸಭೆಗೆ ಮಾಹಿತಿ ನೀಡಿದಾಗ ಅಪರ ಜಿಲ್ಲಾಧಿಕಾರಿಗಳು ಮಾತನಾಡಿ, ಈ ಯೋಜನೆಗೆ ದಾಖಲೆಗಳನ್ನು ನೀಡಬೇಕು ಹಾಗೂ ಯೋಜನೆಯ ಮಾಸ್ಟರ್ ಟ್ರೈನರ್ ಮತ್ತು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಜಾನಪದ ಲೋಕಕ್ಕೆ ಭೇಟಿ ನೀಡಿ ಮುಂದಿನ ಕ್ರಮ ಕೈಗೊಳ್ಳಬೇಕು ಹಾಗೂ ಜಾನಪದ ಲೋಕ ಸಿಬ್ಬಂದಿಗಳು ಅಗತ್ಯ ಸಹಕಾರ ನೀಡುವಂತೆ ಸೂಚಿದರು.ಈ ಸಂದರ್ಭದಲ್ಲಿ ಜ್ಞಾನ ಭಾರತಂ ಮಿಷನ್ ಸದಸ್ಯರುಗಳು, ಸಂಬಂಧಪಟ್ಟ ಮಠಗಳ ಆಡಳಿತ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಬಿಸಿಲ ಬೇಗೆಯಿಂದ ತತ್ತರಿಸಿದ್ದ ಜನರಿಗೆ ತಂಪೆರೆದ ಮಳೆ

### ಬಿಡದಿ ಭಾಗದಲ್ಲಿ ಬಿರುಗಾಳಿ ಸಹಿತ ಜೋರು ಮಳೆ ಶಾಲಾ ಕಾಂಪೌಂಡ್ ಮನೆ ಜಖಂ



ರಾಮನಗರ: ತಾಲ್ಲೂಕಿನಾದ್ಯಂತ ಬುಧವಾರ ಸಂಜೆ ಬಿರುಗಾಳಿ ಸಹಿತ ಭಾರಿಮಳೆ ಸುರಿದಿದ್ದು, ಬಿಸಿಲ ಬೇಗೆಯಿಂದ ತತ್ತರಿಸಿದ್ದ ಜನರಿಗೆ ತಂಪಾದ ವಾತಾವರಣದಿಂದ ಉಲ್ಲಾಸ ಮೂಡಿಸಿದೆ.

ಸಂಜೆ 6.30ರ ವೇಳೆಗೆ ಬಿರುಗಾಳಿ ಸಹಿತ ಆರಂಭಗೊಂಡ ವರ್ಷಧಾರೆ ಕ್ರಮೇಣ ಮಿಂಚು–ಗುಡುಗಿನಿಂದ ಕೂಡಿತ್ತು. ಬಿಸಿಲ ಬೇಗೆಯಲ್ಲಿ ಬೆಂದು ಬಸವಳಿದ ಜನರಲ್ಲಿ ಸಂತಸ ಮನೆ ಮಾಡಿತಾದರೂ ಸಿಡಿಲ ಅಬ್ಬರದಿಂದ ಕೆಲಕಾಲ ಭಯಭೀತರಾದರು. ಒಂದೇ ಸಮನೆ ಸುರಿದ ಮಳೆಯಿಂದ ಕೆಲವೆಡೆ ಚರಂಡಿಗಳು ತುಂಬಿ ಹರಿದವು. ರಸ್ತೆಯಲ್ಲಿ ಹೊಳೆಯಂತೆ ನೀರು ಹರಿದು ತಗ್ಗುಪ್ರದೇಶದ ಕಡೆಗೆ ರಭಸವಾಗಿ ನುಗ್ಗಿತು.ಬೆಳಿಗ್ಗಿನಿಂದ ಎಂದಿನಂತೆ ಸುಡುಬಿಸಿಲಿನಿಂದ ವಾತಾವರಣ ಕೂಡಿತ್ತು. ಸಂಜೆ 5 ಗಂಟೆಯ ಸಮಯಕ್ಕೆ ಮೋಡ ಕವಿದು, ನಂತರ ಗಾಳಿಯೂ ಶುರುವಾಗಿ ಮಿಂಚು ಗುಡುಗು ಸದ್ದು ಮಾಡಿತು. ಸಮಾರು 1 ಗಂಟೆಗೂ ಹೆಚ್ಚು ಕಾಲ ಜೋರು ಮಳೆ ಸುರಿಯಿತು. ಮಳೆ ಸುರಿಯಲಾರಂಭವಾದಾಗ ಜನರ ಮುಖದಲ್ಲಿ ಹರ್ಷ ಕಂಡುಬಂತು. ಮಳೆ ಸುರಿಯುವ ದೃಶ್ಯವನ್ನು ಕೆಲವರು ಕುತೂಹಲದಿಂದ ತಮ್ಮ ಮೊಬೈಲ್‌ಗಳಲ್ಲಿ ಸೆರೆಹಿಡಿದರು. ತುರ್ತು ಕೆಲಸದಲ್ಲಿ ತೊಡಗಿದ್ದ ಕೆಲವು ನಾಗರಿಕರು ಮಳೆಯಲ್ಲೇ ದ್ವಿಚಕ್ರ ವಾಹನಗಳಲ್ಲಿ ತೆರಳುತ್ತಿದ್ದುದು ಕಂಡುಬಂತು.

**ಹೆದ್ದಾರಿಯಲ್ಲಿ ವಾಹನಗಳ ಸಂಚಾರಕ್ಕೆ ತೊಡಕು:**

ಬಿರುಗಾಳಿ ಸಹಿತ ಭಾರಿ ಮಳೆ ಸುರಿದ ಪರಿಣಾಮ ಬೆಂಗಳೂರು–ಮೈಸೂರು ರಾಷ್ಟ್ರೀಯ ದಶಪಥ ಹೆದ್ದಾರಿಯಲ್ಲಿ ವಾಹನಗಳ ಸಂಚಾರಕ್ಕೆ ತೊಡಕಾಗಿತ್ತು. ಎಕ್ಸ್‌ಪ್ರೆಸ್ ಹೈವೆಯಲ್ಲಿ ಅಂಡರ್‌ಪಾಸ್‌ಗಳ ಕೆಳಭಾಗದಲ್ಲಿ ದ್ವಿಚಕ್ರ ವಾಹನಗಳ ಸವಾರರು ಆಶ್ರಯ ಪಡೆದುಕೊಂಡರು. ಮಳೆ ನಿಂತ ನಂತರ ಅಲ್ಲಲ್ಲಿ ನಿಲ್ಲಿಸಿದ್ದ ವಾಹನಗಳು ಒಟ್ಟಿಗೆ ರಸ್ತೆಗಿಳಿದಾಗ ಸಂಚಾರ ದಟ್ಟಣೆ ಹೆಚ್ಚಾಯಿತು. ಕಿ.ಮೀವರೆಗೆ ಟ್ರಾಫಿಕ್ ಜಾಮ್ ಆಗಿತ್ತು.

**ಗಾಣಕಲ್ ಶಾಲೆ ಕಾಂಪೌಂಡ್ ಮತ್ತು ಮನೆ ಜಖಂ:**

ಸುರಿದ ಬಿರುಗಾಳಿ ಸಹಿತ ಮಳೆಗೆ ತಾಲ್ಲೂಕಿನ ಬಿಡದಿ ಹೋಬಳಿಯ ಗಾಣಕಲ್ ಗ್ರಾಮದಲ್ಲಿನ ಸರಕಾರಿ ಶಾಲೆ ಕಾಂಪೌಂಡ್ ನೆಲಕ್ಕುರುಳಿದೆ. ಅಲ್ಲದೆ ಶಾಲೆಯ ಪಕ್ಕದಲ್ಲಿದ್ದ ಹೇಮಹೊಂಬೇಗೌಡ ಎಂಬುವರಿಗೆ ಸೇರಿದ ಹೆಂಚಿನ ಮನೆಯ ಮೇಲೆ ಮರ ಉರುಳಿಬಿದ್ದು ಮೇಲ್ಚಾವಣಿ ಮತ್ತು ಗೋಡೆಗಳು ಜಖಂ ಆಗಿದೆ. ಮಳೆಯ ನೀರಿನಿಂದ ಮನೆಯಲ್ಲಿದ್ದ ರಾಗಿ ಮತ್ತಿತರ ದವಸಧಾನ್ಯಗಳು ಹಾಳಾಗಿದ್ದು ಅಪಾರ ನಷ್ಟ ಉಂಟಾಗಿದೆ

## ಮರು ಮೌಲ್ಯಮಾಪನದಿಂದ ಜಿಲ್ಲೆಗೆ ಟಾಪರ್ ಆದ ವಿದ್ಯಾರ್ಥಿನಿ



ರಾಮನಗರ: ನಗರದ ಹೋಲಿ ಕ್ರಸೆಂಟ್ ಪಿಯು ಕಾಲೇಜಿನ ವಿದ್ಯಾರ್ಥಿನಿ ಅಲ್ಫಿಯಾ ನೂರೈನ್‌ರವರು ವಿಜ್ಞಾನ ವಿಭಾಗದಲ್ಲಿ 594 ಅಂಕಗಳನ್ನು ಪಡೆದು ಜಿಲ್ಲೆ ಮತ್ತು ತಾಲ್ಲೂಕಿಗೆ ಟಾಪರ್ ಆಗಿ ಕೀರ್ತಿ ತಂದಿದ್ದಾರೆ.

ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾದ ಸಂದರ್ಭದಲ್ಲಿ ಮೊದಲಿಗೆ 591 ಅಂಕಗಳನ್ನು ಪಡೆದಿದ್ದು ತಾಲ್ಲೂಕಿಗೆ ದ್ವಿತೀಯ ಸ್ಥಾನದಲ್ಲಿದ್ದರು. ಆದರೆ ಇಂಗ್ಲೀಷ್ ವಿಷಯದಲ್ಲಿ ಇನ್ನೂ ಅಂಕಗಳು ಬರಬೇಕಾಗಿತ್ತೆಂದು ಭಾವಿಸಿ ಉತ್ತರ ಪತ್ರಿಕೆಯ ಮರು ಮೌಲ್ಯ ಮಾಪನಕ್ಕೆ ಮನವಿ ಸಲ್ಲಿಸಿದ್ದರು. ಹಾಗಾಗಿ 3 ಅಂಕಗಳು ಹೆಚ್ಚುವರಿಯಾಗಿ ಬಂದಿರುವ ಕಾರಣ ಇದೀಗ ಅಲ್ಫಿಯಾ ನೂರೈನ್ ಅವರ 594 ಅಂಕಗಳಿಗೆ ಏರಿಕೆಯಾಗಿದೆ.

ಜಿಲ್ಲಾ ಟಾಪರ್ ಆಗಿರುವ ವಿದ್ಯಾರ್ಥಿನಿ ಅಲ್ಫಿಯಾ ನೂರೈನ್ ಅವರನ್ನು ಶಾಸಕ ಎಚ್.ಎ.ಇಕ್ಬಾಲ್ ಹುಸೇನ್‌ರವರು ಅಭಿನಂದಿಸಿದರು. ಸಂಸ್ಥೆಯ ಅಧ್ಯಕ್ಷರಾದ ಡಾ.ಶಾಜಿಯಾ, ಕಾರ್ಯದರ್ಶಿ ಅಲ್ತಾಫ್ ಅಹಮದ್, ಕಾಲೇಜಿನ ಮುಖ್ಯಸ್ಥ ಡಾ. ಫ್ರಕೃದ್ದಿನ್, ಪ್ರಾಂಶುಪಾಲರಾದ ಸ್ಟ್ಯಾನ್ಲಿಪಾಲ್, ಉಪ ಪ್ರಾಂಶುಪಾಲ ಅರುಣ್ ಕವಣಾಪುರ ಮತ್ತಿತರರು ಉಪಸ್ಥಿತರಿದ್ದರು.

## 300 ಕ್ಕೂ ಹೆಚ್ಚು ಆಶಾ ಕಾರ್ಯಕರ್ತರು ಹಾಗೂ ಹಾಲು ಉತ್ಪಾದಕರ ಸಂಘದ ಕಾರ್ಯದರ್ಶಿಗಳಿಗೆ ಸಿ.ಪಿ.ಆರ್. ತರಬೇತಿ ಕಾರ್ಯಾಗಾರ

ಸೂರ್ಯಪ್ರಗತಿನ್ಯೂಸ್.ಕಾಂ




ಶಿರಾ: ಇತ್ತೀಚಿನ ದಿನಗಳಲ್ಲಿ ಕಾರ್ಡಿಯೋಪಲ್ಮನರಿ ರೆಸಸಿಟೇಶನ್ (ಸಿ.ಪಿ.ಆರ್) ಎನ್ನುವುದು ತುರ್ತು ಚಿಕಿತ್ಸೆಯಾಗಿದ್ದು, ಯಾರೊಬ್ಬರ ಉಸಿರಾಟ ಅಥವಾ ಹೃದಯ ಬಡಿತ ನಿಂತಾಗ ಇದನ್ನು ಮಾಡಲಾಗುತ್ತದೆ. ಉದಾಹರಣೆಗೆ, ಯಾರಿಗಾದರೂ ಹಠಾತ್ ಹೃದಯ ಸ್ತಂಭನವಾದಾಗ ಅಥವಾ ಮುಳುಗುವ ಹಂತಕ್ಕೆ ಬಂದಾಗ. (ಸಿ.ಪಿ.ಆರ್) ಜೀವ ಉಳಿಸಲು ಸಹಾಯ ಮಾಡುತ್ತದೆ ಸಮಸ್ಯೆಗಳನ್ನು ಯಾವ ರೀತಿ ಬಗೆಹರಿಸಬೇಕು, ಯಾವ ಮಾನದಂಡಗಳ ಆಧಾರದ ಮೇಲೆ ನಿರ್ಧಾರ ಮಾಡಬಹುದು. ಅತ್ಯಂತ ಯಶಸ್ವಿಯಾಗಿ ಕಾರ್ಯಾಗಾರವನ್ನು ನಡೆಸಲಾಗಿತ್ತು ಎಂದು ತುಮಕೂರು ಹಾಲು ಒಕ್ಕೂಟ ಮಾಜಿ ಅಧ್ಯಕ್ಷರು, ಕರ್ನಾಟಕ ರೇಷ್ಮೆ ಉದ್ಯಮ ನಿಗಮ ಮಾಜಿ ಅಧ್ಯಕ್ಷರಾದ ಎಸ್. ಆರ್.ಗೌಡರವರು ತಿಳಿಸಿದರು.

ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ, ತುಮಕೂರು ಸಹಕಾರಿ ಹಾಲು ಒಕ್ಕೂಟ, ಶಿರಾ ತಾಲ್ಲೂಕು ಹಾಗೂ ಆಶಾ ಕಾರ್ಯಕರ್ತೆಯರು ಸಮುದಾಯ ಆರೋಗ್ಯದ ನಂಬಿಕೆಯ ಸೇತುವೆ ಹಾಗೂ ತಾಯಿ–ಮಗು ಆರೈಕೆ ಆಸ್ಪತ್ರೆ ಇವರುಗಳ ಸಹಯೋಗದೊಂದಿಗೆ ಆಶಾ ಕಾರ್ಯಕರ್ತರು ಹಾಗೂ ಹಾಲು ಉತ್ಪಾದಕರ ಸಂಘದ ಕಾರ್ಯದರ್ಶಿಗಳಿಗೆ ಸಿ.ಪಿ.ಆರ್. ತರಬೇತಿ ಕಾರ್ಯಕ್ರಮವನ್ನು ಏ.30 ರಂದು ಗುರುವಾರ ಬೆಳಿಗ್ಗೆ 10 ಗಂಟೆಯಿಂದ 2 ಗಂಟೆಯವರೆಗೆ ಶಿರಾರಸ್ತೆಯ ಡಾ.ವರ್ಗೀಸ್ ಕುರಿಯನ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಶ್ರೀ ದೇವಿ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್.ಪಾಟೀಲ್‌ರವರು ಮಾತನಾಡುತ್ತಾ ವೈದ್ಯಕೀಯ ಲೋಕದಲ್ಲಿ ಹೊಸ–ಹೊಸ ಅವಿಷ್ಕಾರಗಳು ನಡೆಯುತ್ತಿವೆ, ಇಲ್ಲಿ ನಡೆದಿರುವ ಕಾರ್ಯಾಗಾರವು ಯಶಸ್ವಿಯಾಗಿ ಶಿರಾ ತಾಲ್ಲೂಕಿನ ಸುತ್ತಮುತ್ತಲಿನಿಂದ ಸುಮಾರು 300 ಕ್ಕೂ ಹೆಚ್ಚು ಆಶಾ ಕಾರ್ಯಕರ್ತರು ಭಾಗವಹಿಸಿದ್ದರು. ಹೃದಯ ಸ್ನಾಯುವಿನ ಪುನರುಜ್ಜೀವನ (ಸಿ.ಪಿ.ಆರ್.) ಎಂಬುದು ಹೃದಯ ಅಥವಾ ಉಸಿರಾಟದ ಬಂಧನದ ಸಮಯದಲ್ಲಿ ಬಳಸಲಾಗುವ ತುರ್ತು ವಿಧಾನವಾಗಿದ್ದು, ಮೆದುಳಿನ ಕಾರ್ಯವನ್ನು ಕಾಪಾಡಿಕೊಳ್ಳಲು ಮತ್ತು ಸ್ವಯಂಪ್ರೇರಿತ ಉಸಿರಾಟ ಮತ್ತು ಹೃದಯ ಬಡಿತವನ್ನು ಪುನಃಸ್ಥಾಪಿಸುವವರೆಗೆ ರಕ್ತ ಪರಿಚಲನೆಯನ್ನು ಕಾಪಾಡಿಕೊಳ್ಳಲು ಸಹಾಯವಾಗುತ್ತದೆ ಹೊಸ–ಹೊಸ ಆರೋಗ್ಯ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಇಲ್ಲಿಂದ ಹೊರಹೊಮ್ಮುವ ಸಲಹೆ – ಸೂಚನೆಗಳು ವೈದ್ಯಕೀಯ ಲೋಕಕ್ಕೆ ಸಹಕಾರಿಯಾಗಲಿ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶಿರಾದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಡಿ.ಎಂ.ಗೌಡರವರು ಮಾತನಾಡುತ್ತಾ ಹದಿಹರೆಯಕ್ಕೆ ಕಾಲಿಡುವ ಹೆಣ್ಣು ಮಕ್ಕಳು ಮತ್ತು ಮಧ್ಯ ವಯಸ್ಸಿನ ಹೆಂಗಸರು ಪದೇ ಪದೇ ಎದುರಿಸುವ ಆರೋಗ್ಯ ಸಮಸ್ಯೆಗಳನ್ನು ಮತ್ತು ಅವುಗಳ ಪರಿಹಾರಕ್ಕೆ ಇರುವ ಚಿಕಿತ್ಸಾ ವಿಧಾನಗಳು ರಕ್ತದ ಹರಿವು ಸುಮಾರು ನಾಲ್ಕು ನಿಮಿಷಗಳ ಕಾಲ ನಿಂತ ನಂತರ ಮೆದುಳಿಗೆ ಹಾನಿಯಾಗಬಹುದು ಮತ್ತು ಸುಮಾರು ಏಳು ನಿಮಿಷಗಳ ನಂತರ ಬದಲಾಯಿಸಲಾಗದ ಹಾನಿಯಾಗಬಹುದು. ಸಾಮಾನ್ಯವಾಗಿ ರಕ್ತದ ಹರಿವು ಒಂದರಿಂದ ಎರಡು ಗಂಟೆಗಳ ಕಾಲ ನಿಂತರೆ, ದೇಹದ ಜೀವಕೋಶಗಳು ಸಾಯುತ್ತವೆ. ಆದ್ದರಿಂದ, ಸಾಮಾನ್ಯವಾಗಿ, ರಕ್ತದ ಹರಿವು ನಿಂತ ಏಳು ನಿಮಿಷಗಳಲ್ಲಿ ನಡೆಸಿದರೆ ಮಾತ್ರ (ಸಿ.ಪಿ.ಆರ್.) ಪರಿಣಾಮಕಾರಿಯಾಗಿದೆ. ಹೃದಯವು ಸಾಮಾನ್ಯ ಲಯವನ್ನು ಕಾಯ್ದುಕೊಳ್ಳುವ ಸಾಮರ್ಥ್ಯವನ್ನು ತ್ವರಿತವಾಗಿ ಕಳೆದುಕೊಳ್ಳುತ್ತದೆ. ಮುಳುಗುವಿಕೆಯ ಸಮೀಪದಲ್ಲಿ ಕಂಡುಬರುವಂತೆ ಕಡಿಮೆ ದೇಹದ ಉಷ್ಣತೆಯು ಮೆದುಳು ಬದುಕುಳಿಯುವ ಸಮಯವನ್ನು ಹೆಚ್ಚಿಸುತ್ತದೆ. ತಿಳಿಸಿದರು.

ಇದೇ ಸಂದರ್ಭದಲ್ಲಿ ಡಿ.ಎಂ.ಹಾಲು ಉತ್ಪಾದಕರ ಒಕ್ಕೂಟದ ಗಿರೀಶ್, ಮಂಜುನಾಥ್, ಪ್ರಕಾಶ್, ಆಶಾ ಮೆಂಟರ್ ಮುಖ್ಯಸ್ಥರಾದ ಮಂಜುಳ, ಶಿರಾ ತಾಲ್ಲೂಕು ಆಶಾ ಮೆಂಟರ್ ಮುಖ್ಯಸ್ಥರು ಹೇಮ, ಮಾಜಿ ತಾಲ್ಲೂಕು ಪಂಚಾಯತ್ ಅಧ್ಯಕ್ಷರಾದ ಶ್ರೀನಿವಾಸ್, ಶ್ರೀದೇವಿ ಆಸ್ಪತ್ರೆಯ ಆಘಾತ ಮತ್ತು ತುರ್ತು ಆರೈಕೆ ನಿರ್ದೇಶಕರಾದ ಡಾ.ರಾಮ್ ಕೆ.ನಾಯರ್, ತುರ್ತು ಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ.ದೀಪಕ್, ಅಂಗರಚನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಡಿ.ಯೋಗೀಶ್, ಶ್ರೀದೇವಿ ಆಸ್ಪತ್ರೆಯ ಸಿ.ಎ.ಓ. ಪ್ರದೀಪ್ ವೆಗ್ಗಿ, ಶುಶ್ರೂಷಕ ಉಪ ಅಧೀಕ್ಷಕರಾದ ನರಸಪ್ಪ ಹಾಗೂ ಶ್ರೀದೇವಿ ಮಾರ್ಕೇಟಿಂಗ್ ವಿಭಾಗದ ರಾಜೇಶ್ ಮುಂತಾದವರು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಆ.21 ರಿಂದ 3 ದಿನ ವಿಶೇಷ ಲೋಕ್ ಅದಾಲತ್;

## ಸುಪ್ರೀಂ ಕೋರ್ಟ್ ಪ್ರಕರಣಗಳಿಗೆ 'ಸಮಾಧಾನ್ ಸಮಾರೋಹ್' ವಿಡಿಯೋ ಕಾನ್ಫರೆನ್ಸ್ ಮೂಲಕ ಇತ್ಯರ್ಥ

ಸೂರ್ಯಪ್ರಗತಿನ್ಯೂಸ್.ಕಾಂ




ತುಮ ಕೂರು:ಆಗಸ್ಟ್ 21 ರಿಂದ 3 ದಿನಗಳು ನಡೆಯುವ ಸುಪ್ರೀಂ ಕೋರ್ಟ್‌ನ ವಿಶೇಷ ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಡಿಯೋ ಕಾನ್ಫರೆನ್ಸ್ ಮೂಲಕ ಕಕ್ಷಿದಾರರು ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಹೈ ಕೋರ್ಟ್ ನ್ಯಾಯಾಧೀಶರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಕಾರ್ಯ ನಿರ್ವಾಹಕ ಅಧ್ಯಕ್ಷರಾದ ನ್ಯಾ. ಅನು ಶಿವರಾಮನ್ ತಿಳಿಸಿದ್ದಾರೆ.

ಬೆಂಗ ಳೂರಿನ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದಲ್ಲಿ ಗುರುವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯಾದ್ಯಂತ ಸುದ್ದಿಗ'ೋಷ್ಠಿ ನಡೆಸಿದ ಅವರು, ಸುಪ್ರೀಂ ಕೋರ್ಟ್ ನಲ್ಲಿ ಪ್ರಕರಣಗಳು ಬಾಕಿಯಿದ್ದು, ಹೊರ ರಾಜ್ಯದ ಕಕ್ಷಿದಾರರು ನ್ಯಾಯಾಲಯಕ್ಕೆ ಸಕಾಲಕ್ಕೆ ಹಾಜರಾಗದೆ ಪ್ರಕರಣಗಳು ಬಾಕಿಯಿರುವ ಹಿನ್ನೆಲೆಯಲ್ಲಿ ಹೊರ ರಾಜ್ಯದ ಕಕ್ಷಿದಾರರಿಗೆ ಅನುಕೂಲವಾಗಬೇಕೆಂಬ ನಿಟ್ಟಿನಲ್ಲಿ ಸುಪ್ರೀ ಂ ಕೋರ್ಟ್ ಮುಖ್ಯ ನ್ಯಾಯಾಧೀಶರ ಆದೇಶ ದಂತೆ 'ಸಮಾಧಾನ್ ಸಮರೋಹ್' ಕಾರ್ಯ ಕ್ರಮದ ಮೂಲಕ ಆಗಸ್ಟ್ 21 ರಿಂದ 3 ದಿನಗ'ಳು ವಿಶೇಷ ಲೋಕ್ ಅದಾಲತ್ ನಡೆಸ ುತ್ತಿದ್ದು, ಈ ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಮೂಲಕ ಪೂರ್ವ ಸಂಧಾ ನ ಕಾರ್ಯಕ್ರಮಗಳು ನಡೆದು ಆಗಸ್ಟ್ 21 ರಿಂದ' 3 ದಿನಗಳು ವಿಡಿಯೋ ಕಾನ್ಫರೆನ್ಸ್ ಮೂಲಕ' ಕಕ್ಷಿದಾರರು ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಅವರು ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ರಾಜ್ಯ ಕಾನೂನು ಸೇವೆಗಳ ಸಮಿತಿ ಅಧ್ಯಕ್ಷರಾದ ನ್ಯಾ. ಆರ್. ದೇವದಾಸ್, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ನ್ಯಾಯಾಧೀಶರಾದ ಹೆಚ್. ಶಶಿಧರ್‌ಶೆಟ್ಟಿ ಇದ್ದರು.

ಮುಂ ದುವರೆದು, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾ. ನ'ೂರುನ್ನೀಸ ಅವರು ತುಮಕೂರಿನಲ್ಲಿ ಸುದ್ದಿಗೋಷ್ಠಿಯಲ್ಲಿದ್ದು, ಸುಪ್ರೀಂ ಕೋರ್ಟ್‌ನಲ್ಲಿ ರಾಜ್ಯಕ್ಕೆ ಸಂಬಂಧಿಸಿದಂತೆ 4328 ಪ್ರಕರಣಗಳು ಇದ್ದು, ತುಮಕೂರು ಜಿಲ್ಲೆಗೆ ಸಂಬಂಧಿಸಿದಂತೆ 101 ಪ್ರಕರಣಗಳು ಬಾಕಿ ಇರುತ್ತವೆ. ಸುಪ್ರೀಂ ಕೋರ್ಟ್‌ನಲ್ಲಿ ನಿರ್ದಿಷ್ಟ ಪ್ರಕರಣಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ವಿಶೇಷ ಲೋಕ್ ಅದಾಲತ್‌ನಲ್ಲಿ ಇತ್ಯರ್ಥ ಪಡಿಸಲಾಗುತ್ತಿದ್ದು, ಸಂಬಂಧಿಸಿದ ಪ್ರಕರಣಗಳಿಗೆ ಜಿಲ್ಲೆಯ ಕಕ್ಷಿದಾರರಿಗೆ ನೋಟಿಸ್ ಜಾರಿಗೊ ಳಿಸಿ ಶುಕ್ರವಾರದಿಂದಲೇ ಪೂರ್ವ ಸಂಧಾನ ಸಭೆಯನ್ನು ನಡೆಸಲಾಗುವುದು. ಅಲ್ಲದೆ, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಪ್ರಕರಣಗಳಿದ್ದಲ್ಲಿ ಸಂಬಂಧಿಸಿದ ಪಕ್ಷಗಾರರು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಹಾಜರಾಗಿ ತಮ್ಮ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡಬಹುದಾಗಿದೆ ಎಂದು ಅವರು ತಿಳಿಸಿದರು.

ಪ್ರಕ ರಣಗಳಿಗೆ ಸಂಬಂಧಿಸಿದಂತೆ ಪಕ್ಷಗಾರರು ದೆಹಲಿಗೆ ಹೋಗಲು ಸಾಧ್ಯ ವಾಗದಿರುವ ಕಾರಣ 'ಸಮಾಧಾನ್ ಸಮಾ ರೋಹ್' ಕಾರ್ಯಕ್ರಮದ ಮೂಲಕ ತಮ್ಮ ಪ್ರಕರಣಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕವೇ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸದಾವ ಕಾಶವಾಗಿದ್ದು, ಸಾರ್ವಜನಿಕರು ಸದುಪ'ಯೋಗಪಡಿಸಿಕೊಳ್ಳಲು ಅವರು ಕರೆ ನೀಡಿದ್ದಾರೆ.

# ತುಮಕೂರಿನಲ್ಲಿ ಭರಣಿ ಮಳೆ ಹಬ್ಬರ ರೈತರ ಮೊಗದಲ್ಲಿ ಮಂದಹಾಸ

ತುರ ುವೇಕೆರೆ: ತಾಲ್ಲೂಕಿನ ಗಡಿ ಭಾಗ ಹಾಗೂ ದಂಡಿನ ಶಿವರ ಹೋಬಳಿಯ ಬೆರಳೆಣಿಕೆಯಷ್ಟು ಗ್ರಾಮಗಳಲ್ಲಿ ಭರಣಿ ಮಳೆ ಬಿದ್ದು ರೈತರ ಮೊಗದಲ್ಲಿ ಮಂದಹಾಸ ಮೂಡಿಸಿದೆ.

ಚಿಕ್ಕನಾ ಯಕಹಳ್ಳಿ ಭಾಗದಿಂದ ಸಂಜೆ ಉತ್ತಮ ಮಳೆಮೋಡ ಬರುವ ನಿರೀಕ್ಷೆ ಇತ್ತು. ಆದರೆ ಇದ್ದಕ್ಕಿದ್ದಂತೆ ಗಾಳಿ ಹೆಚ್ಚಿದ್ದರಿಂದ ಗಡಿಗೆ ಹೊಂದಿಕೊಂಡಂತೆ ಇರುವ ಅಮ್ಮಸಂದ್ರ ರೈಲ್ವೆ ನಿಲ್ದಾಣ ಬಳಿಯ ರಸ್ತೆ ಬದಿಯಲ್ಲಿದ್ದ ವಿವಿಧ ಮರಗಳ ಕೊಂಬೆಗಳು ವಿದ್ಯುತ್ ತಂತಿ ಮೇಲೆ ಮುರಿದು ಬಿದ್ದಿವೆ.

ಅಮ್ಮಸ'ಂದ್ರ ನಿರಂತರ ಜ್ಯೋತಿ ಕೇಬಲ್ ಮೇಲೆ ಕೊಂಬೆಗಳು ಬಿದ್ದಿವೆ. ಇದರಿಂದ ವಿದ್ಯುತ್ ತಕ್ಷಣ ಕಡಿತವಾಗಿದೆ. ಕುರುಬರಹಳ್ಳಿ ಗೇಟ್ ಬಳಿ ತೆಂಗಿನ ಮರ ಮುರಿದು ಬುಡ ಸಮೇತ ದಾರಿಗೆ ಬಿದ್ದಿದ್ದರಿಂದ ಕೆಲ ಕಾಲ ಸಂಚಾರಕ್ಕೆ ಅಡಚಣೆಯಾಗಿತ್ತು. ಮಾರತಮ್ಮನಹಳ್ಳಿ ಗುಂಡುದೋಪು ಬಳಿಯ ಫಸಲಿಗೆ ಬಂದ ಅಡಿಕೆ ಮರ ಸೀಳಿ ಬಿದ್ದಿವೆ.

ತಾಲ್ಲೂಕಿನ ಸಂಪಿಗೆ ಗ್ರಾಮ ಮತ್ತು ಅದರ ಆಸುಪಾಸಿನ ಗ್ರಾಮ ಗಳು, ಹುಲ್ಲೇಕೆರೆ ಗ್ರಾಮಗಳಲ್ಲಿ ಉತ್ತಮ ಮಳೆಯಾಗಿದೆ.

ತುಮಕೂರು: ಜಿಲ್ಲೆಯ ವಿವಿಧೆಡೆ ಕಳೆದ 24 ಗಂಟೆಗಳಲ್ಲಿ (ಬುಧವಾರ ಬೆಳಿಗ್ಗೆ 8.30 ವರೆಗೆ) ಬಿದ್ದ ಮಳೆ ವಿವರ (ಮಿ.ಮೀ).

ತುಮಕೂರು ಪಶ್ಚಿಮ 5.7 ಮಿ.ಮೀ, ಉತ್ತರ 6, ದಕ್ಷಿಣ 8.8 ಮಿ.ಮೀ, ಬೆಳ್ಳಾವಿ 8, ಗೂಳೂರು 7.9, ಹೆಬ್ಬೂರು 5.7, ಊರ್ಡಿಗೆರೆ 6.9, ಕೋರ 7.9, ಚಿಕ್ಕನಾಯಕನಹಳ್ಳಿ 32.7, ಶೆಟ್ಟಿಕೆರೆ 48 ಮಿ.ಮೀ, ಗುಬ್ಬಿ 14.8, ಸಿ.ಎಸ್.ಪುರ 7.7, ಚೇಳೂರು 11.5, ಹಾಗಲವಾಡಿ 9, ಕಡಬ 18.9, ನಿಟ್ಟೂರು 22, ಕೊರಟಗೆರೆ 5, ಸಿ.ಎನ್.ದುರ್ಗ 6.7, ಹೊಳವನಹಳ್ಳಿ 6.9, ಕೋಳಾಲ 5, ಕುಣಿಗಲ್ 6, ಕೊತ್ತಗೆರೆ 5 ಮಿ.ಮೀ ಮಳೆಯಾಗಿದೆ.

ಮಧ ುಗಿರಿ 5.9 ಮಿ.ಮೀ, ದೊಡ್ಡೇರಿ 10, ಇಟಕದಿಬ್ಬನಹಳ್ಳಿ 13.7, ಪಾವಗಡ ತಾಲ್ಲೂಕು ವೈ. ಎನ್.ಹೊಸಕೋಟೆ 16.7, ಶಿರಾ ತಾಲ್ಲೂಕು ಕಳ್ಳಂಬೆಳ್ಳ 15.7, ತಿಪಟೂರು 20, ಹೊನ್ನವಳ್ಳಿ 17.5, ಕೆ.ಬಿ.ಕ್ರಾಸ್ 19.7, ನೊಣವಿನಕೆರೆ 6, ತುರುವೇಕೆರೆ 5, ದಂಡಿನಶಿವರ 18.8 ಮಿ.ಮೀ ಮಳೆ ಬಿದ್ದಿದೆ.

### ಭಾರಿ ಮಳೆಗೆ ವೃದ್ಧ ದುರ್ಮರಣ

**ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಬ್ಯಾಲ ಕ'ೆರೆಯಲ್ಲಿ ರಾತ್ರಿ ಸುರಿದ ಭಾರಿ ಮಳೆಗೆ ವೃದ್ಧರೊಬ್ಬರು ದುರ್ಮರಣಕ್ಕೀಡಾಗಿದ್ದಾರೆ.ಮೃತರನ್ನು 68 ವರ್ಷದ ಪುಟ್ಟಯ್ಯ ಎಂದು ಗುರುತಿಸಲಾಗಿದೆ. ಮರಬಿದ್ದು ಪುಟ್ಟಯ್ಯ ಸಾವನ್ನಪ್ಪಿದ್ದಾರೆ.ಪುಟ್ಟಯ್ಯ ತಮ್ಮ ತೋಟದಲ್ಲಿದ್ದ ವೇಳೆ ಹಠಾತ್ತನೆ ಮಳೆ ಶುರುವಾದ ಕಾರಣ ರಕ್ಷಣೆಗಾಗಿ ಅವರು ಮರದ ಕೆಳಗೆ ಆಶ್ರಯ ಪಡೆದಿದ್ದರು. ಈ ಸುಂದರ್ಭದಲ್ಲಿ ಬಿರುಗಾಳಿ ಸಹಿತ ಮಳೆ ಬಂದಿದ್ದರಿಂದ ಮರದ ಭಾರಿ ಗಾತ್ರದ ಕೊಂಬೆಯೊಂದು ಮುರಿದು ನೇರವಾಗಿ ಅವರ ತಲೆಯ ಮೇಲೆ ಬಿದ್ದಿದೆ. ಇದರ ತೀವ್ರತೆಗೆ ಪುಟ್ಟಯ್ಯ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ಚಿಕ್ಕನಾಯಕನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸ'ರು ವಿವಿಧ ಆಯಾಮಗಳಲ್ಲಿ ಪೊಲೀಸರು ತನಿಖೆ ನಡೆಸಿದ್ದಾರೆ.**

# 'ಕೆಡಿ' ಚಿತ್ರಕ್ಕೆ ಭರ್ಜರಿ ರೆಸ್ಪಾನ್ಸ್:

## ಧ್ರುವ ಸರ್ಜಾ ಅವರ ರಗಡ್ ಲುಕ್‌ಗೆ ಅಭಿಮಾನಿಗಳು ಫಿದಾ

ಬೆಂಗಳ'ೂರು: ಸ್ಯಾಂಡಲ್‌ವುಡ್‌ನ ಬಹುನಿರೀಕ್ಷಿತ 'ಕೆಡಿ' ಸಿನಿಮಾ ರಾಜ್ಯಾದ್ಯಂತ ಅದ್ದೂರಿಯಾಗಿ ಬಿಡುಗಡೆಯಾಗಿದ್ದು, ಚಿತ್ರಮಂದಿರಗಳಲ್ಲಿ ಧ್ರುವ ಸರ್ಜಾ ಅಭಿಮಾನಿಗಳ ಸಂಭ್ರಮ ಮುಗಿಲು ಮುಟ್ಟಿದೆ. ಜೋಗಿ ಪ್ರೇಮ್ ನಿರ್ದೇಶನದ ಈ ಚಿತ್ರಕ್ಕೆ ಮೊದಲ ದಿನವೇ ಅದ್ಭುತ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಸಿನಿಮಾ ನೋಡಲು ಹೋದ ಪ್ರೇಕ್ಷಕರಿಗೆ ಕ್ಲೈಮ್ಯಾಕ್ಸ್‌ನಲ್ಲಿ ಒಂದು ದೊಡ್ಡ ಸರ್ಪ್ರೈಸ್ ಕಾದಿತ್ತು ಚಿತ್ರದ ಕೊನೆಯಲ್ಲಿ 'ಕೆಡಿ 2' ಬರಲಿದೆ ಎಂಬ ಸುಳಿವು ನೀಡಲಾಗಿದ್ದು, ಇದು ಅಭಿಮಾನಿಗಳ ಎಕ್ಸೈಟ್‌ಮೆಂಟ್ ಅನ್ನು ದುಪ್ಪಟ್ಟು ಮಾಡಿದೆ.



### ಪ್ರೇಮ್ ಹೇಳಿದ್ದೇನು?

ಸಿನಿಮಾದ ಯಶಸ್ಸಿನ ಬೆನ್ನಲ್ಲೇ ಮಾಧ್ಯಮಗಳೊಂದಿಗೆ ಮಾತನಾಡಿದ ನಿರ್ದೇಶಕ ಪ್ರೇಮ್, ಪಾರ್ಟ್ 2 ಕುರಿತು ಕುತೂಹಲಕಾರಿ ವಿಷಯಗಳನ್ನು ಹಂಚಿಕೊಂಡಿದ್ದಾರೆ. "ಖಂಡಿತವಾಗಿಯೂ ಈ ಸಿನಿಮಾಗೆ ಎರಡನೇ ಭಾಗ ಬರಲಿದೆ. ಇದಕ್ಕಾಗಿ ಕೆವಿಎನ್ ಪ್ರೊಡಕ್ಷನ್ಸ್ ಕಾರಣ. ಈಗಷ್ಟೇ ಸಿನಿಮಾ ಬಿಡುಗಡೆಯಾಗಿದೆ, ಮೊದಲು ಇದು ಎಲ್ಲ ಭಾಷೆಗಳಲ್ಲಿ ಜನರಿಗೆ ತಲುಪಲಿ. 'ಕೆಡಿ 2' ಮಾಡುವುದಕ್ಕೆ ನಮಗೆ ಕನಿಷ್ಠ ಒಂದು ವರ್ಷ ಸಮಯ ಬೇಕಾಗುತ್ತದೆ" ಎಂದು ಅವರು ತಿಳಿಸಿದ್ದಾರೆ.

ಇನ್ನು ಚಿತ್ರದಲ್ಲಿ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿರುವ ಕಿಚ್ಚ ಸುದೀಪ್ ಅವರ ಪಾತ್ರ ಮುಂದಿನ ಭಾಗದಲ್ಲಿ ಪೂರ್ಣ ಪ್ರಮಾಣದಲ್ಲಿ ಇರುತ್ತದೆಯೇ ಎಂಬ ಪ್ರಶ್ನೆಗೆ, "ಅದನ್ನು ಕಾದು ನೋಡಿ" ಎನ್ನುವ ಮೂಲಕ ಸಸ್ಪೆನ್ಸ್ ಕಾಯ್ದುಕೊಂಡಿದ್ದಾರೆ.

ಈ ಸಿನಿಮಾದಲ್ಲಿ ಧ್ರುವ ಸರ್ಜಾ ಅವರ ರಗಡ್ ಲುಕ್ ಮತ್ತು ಮಚ್ಚು ಹಿಡಿದು ಅಬ್ಬರಿಸಿರುವ ಶೈಲಿ ಅಭಿಮಾನಿಗಳಿಗೆ ಸಖತ್ ಇಷ್ಟವಾಗಿದೆ. ಇದೇ ವಿಚಾರವಾಗಿ ಮಾತನಾಡಿದ ಧ್ರುವ ಸರ್ಜಾ, "ಫುಲ್ ಟೈಮ್ ಮಚ್ಚು ಹಿಡಿಯಲು ನಾನು ಸದಾ ಸಿದ್ಧ. ಆದರೆ ಅಂತಹ ಪಾತ್ರಗಳನ್ನು ಸೃಷ್ಟಿಸಲು ಎಲ್ಲ ನಿರ್ದೇಶಕರೂ ಪ್ರೇಮ್ ಆಗಲು ಸಾಧ್ಯವಿಲ್ಲ" ಎಂದು ತಮ್ಮ ನಿರ್ದೇಶಕರನ್ನು ಶ್ಲಾಘಿಸಿದ್ದಾರೆ. ಯುಎಫ್‌ಓ ತಾಂತ್ರಿಕ ಸಮಸ್ಯೆಯಿಂದ ಬೆಳಿಗ್ಗೆ ಕೆಲವು ಶೋಗಳು ರದ್ದಾಗಿದ್ದರೂ, ಈಗ ಎಲ್ಲೆಡೆ ಹೌಸ್‌ಫುಲ್ ಪ್ರದರ್ಶನ ಕಾಣುತ್ತಿರುವುದು ಚಿತ್ರತಂಡಕ್ಕೆ ಖುಷಿ ತಂದಿದೆ.

### 'ಪ್ರೇಮ್ ಈಸ್ ಬ್ಯಾಕ್' ಎಂದ ಫ್ಯಾನ್ಸ್

ಸಿನಿಮಾ ದಲ್ಲಿ ಪ್ರೇಮ್ ಅವರ ಮಗ ಕೂಡ ಸಣ್ಣ ಪಾತ್ರವೊಂದರಲ್ಲಿ ನಟಿಸಿದ್ದು, ಈ ಬಗ್ಗೆ ಕೇಳಿದಾಗ "ಅವನು ಈಗ ಓದುತ್ತಿದ್ದಾನೆ, ಸದ್ಯಕ್ಕೆ ಅವನ ಬಗ್ಗೆ ಚರ್ಚೆ ಬೇಡ" ಎಂದು ಪ್ರೇಮ್ ತಿಳಿಸಿದ್ದಾರೆ. ಶಿವರಾಜ್‌ಕುಮಾರ್ ಅವರ ಪತ್ನಿ ಗೀತಾ ಶಿವರಾಜ್‌ಕುಮಾರ್ ಕೂಡ ಸಿನಿಮಾ ನೋಡಿ ಮೆಚ್ಚುಗೆ ವ್ಯಕ್ತಪಡಿಸಿರುವುದು ಚಿತ್ರತಂಡದ ಉತ್ಸಾಹ ಹೆಚ್ಚಿಸಿದೆ. ಒಟ್ಟಾರೆಯಾಗಿ 'ಪ್ರೇಮ್ ಈಸ್ ಬ್ಯಾಕ್' ಎಂದು ಪ್ರೇಕ್ಷಕರು ಜೈಕಾರ ಹಾಕುತ್ತಿದ್ದು, 'ಕೆಡಿ' ಹವಾ ಜೋರಾಗಿದೆ.

# ಕೀರ್ತಿ, ಪದವಿ, ಪ್ರತಿಷ್ಠೆ, ಶೋಕಿ ಬುದ್ಧಿ ಬಿಟ್ಟು ಅಧ್ಯಯನ ಮಾಡಿ– ಹಿರಿಯ ನಟ ದೊಡ್ಡಣ್ಣ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಭೂಮಿಗೆ ರೈತ ಮೊದಲ ಮಗ, ಎರಡನೇ ಮಗ ಸೈನಿಕ ಮೂರನೇ ಮಗ– ಶಿಕ್ಷಕ ಇವರ ಋಣ ತೀರಿಸಲು ಸಾಧ್ಯವೇ ಇಲ್ಲ. ಶೋಕಿ ಬುದ್ಧಿ ಬಿಟ್ಟು ಸತ್ಯದಿಂದ ಬದುಕೋದನ್ನ ಕಲಿಯಬೇಕು ಎಂದು ವಿದ್ಯಾರ್ಥಿಗಳಿಗೆ ಹಿರಿಯ ನಟ ದೊಡ್ಡಣ್ಣ ತಿಳಿಸಿದರು.

ನಗರದ ಸಿದ್ಧಾರ್ಥ ವ್ಯವಹಾರ ನಿರ್ವಹಣಾ ಅಧ್ಯಯನ ಕೇಂದ್ರದಲ್ಲಿ ಎಸ್.ಎಸ್.ಐ.ಬಿ.ಎಂ ನ ಇಪ್ಪತ್ತನೇ ವಾರ್ಷಿಕೋತ್ಸವ ಮತ್ತು ಇನ್ಸೈರೋ 2026 ನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಭಾಷೆ ಜತೆಯಲ್ಲೇ ನಾವು ಬದುಕಬೇಕು. ನಮ್ಮ ಕನ್ನಡ ಭಾಷೆಗಿರುವ ಗತ್ತು ಯಾವುದಕ್ಕೂ ಇಲ್ಲ! ಕನ್ನಡಕ್ಕಿಂತ ಸರ್ವಶ್ರೇಷ್ಠ ಭಾಷೆ ಇನ್ನೊಂದಿಲ್ಲ. ತಾಯಿ ಸತ್ತರೆ ಮನುಷ್ಯ ಬದುಕುತ್ತಾನೆ ಆದರೆ ಅನ್ನವಿಲ್ಲದೆ ಬದುಕು ಅಸಾಧ್ಯ. ಅನ್ನ ಬಿಟ್ಟವರು ಮುಂದಿನ ಜನ್ಮದಲ್ಲಿ ಭಿಕ್ಷುಕರಾಗುತ್ತಾರೆ. ಅನ್ನ ದೇವರಿ ಗಿಂತ ಇನ್ನೊಂದು ದೇವರಿಲ್ಲ, ಬಂಧುಗಳೇ ಬಾಳಸಂಗಾತಿ,



ನೆರೆಹೊರೆ, ಭೂಮಿ ಸಿಗಬೇಕೆಂದರೆ ಜನ್ಮಾಂತರದ ಪುಣ್ಯ ಬೇಕೆಂದು ತಮ್ಮ ಅನುಭವಗಳನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು. ತುಮಕೂರು ವಿಶ್ವವಿದ್ಯಾನಿಲಯ ಕುಲಪತಿಗಳಾದ ಪ್ರೊ. ವೆಂಕಟೇಶ್ವರಲು ಮಾತನಾಡಿ ಜಾಬ್ಸ್ ಇಲ್ಲದೆ ಹೋಪ್ಸ್ ಇಲ್ಲ ಇದು ಈಗೀನ ವಿದ್ಯಾರ್ಥಿಗಳ ಮನಸ್ಥಿತಿ.

ಆಚಾರ್ಯ ವಿನೋಭಾಬಾವೆಯವರಿಂದ ಪ್ರೇರಣೆಗೊಂಡು ಎಚ್.ಎಂ ಗಂಗಾಧರಯ್ಯನವರು ಕಟ್ಟಿದ ಈ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯು ಬಡವರ ಹಿಂದುಳಿದವರ ವಿದ್ಯಾರ್ಥಿಗಳ ಜೀವನಕ್ಕೆ ಆರ್ಥಿಕ ಸಾಮಾಜಿಕ ನ್ಯಾಯ ಒದಗಿಸುವಲ್ಲಿ ಪ್ರಮುಖ ಪಾತ್ರವಹಿಸಿದೆ ಎಂದು ಸಂಸ್ಥೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಎಸ್‌ಎಸ್‌ಐಬಿಎಂ ಕಾಲೇಜಿನ ಇಪ್ಪತ್ತರ ವಾರ್ಷಿಕೋತ್ಸವ ಸಂಭ್ರಮದಲ್ಲಿ ಮುಖ್ಯ ಅತಿಥಿ ದೊಡ್ಡಣ್ಣನವರನ್ನ "ಕಲಾಪರಿಪೂರ್ಣ" ಎಂಬ ಬಿರುದು ನೀಡುವ ಮೂಲಕ ಸಂಸ್ಥೆ ಮತ್ತು ಗಣ್ಯರು ಗೌರವಿಸಿ ಸನ್ಮಾನಿಸಿದರು.

ಕಾರ್ಯ ಕ್ರಮದಲ್ಲಿ ಪ್ರಾಂಶುಪಾಲರಾದ ಡಾ.ಜಿ ಮಮತ ಅಧ್ಯಕ್ಷತೆ ವಹಿಸಿದ್ದರು. ಮುಖ್ಯವೇದಿಕೆಯಲ್ಲಿ ಎಸ್.ಎಸ್.ಐ.ಟಿ ಕಾಲೇಜಿನ ಪ್ರಾಂಶುಪಾಲ, ಡಾ.ಮಹಂತೇಶ್ ಎಂ ನಾಡಕಟ್ಟಿ,ಎಸ್.ಎಸ್.ಎಸ್.ಇ ಕಾಲೇಜಿನ ಪ್ರಾಂಶುಪಾಲ ಶ್ರೀ ಸಂಜೀವ್ ಕುಮಾರ್ ಹಾಘೂ ಎಲ್ಲಾ ವಿಭಾಗದ ಮುಖ್ಯಸ್ಥರು ಪ್ರಾಧ್ಯಾಪಕರು ವಿದ್ಯಾರ್ಥಿಗಳು ಹಾಜರಿದ್ದರು.

# ಎಷ್ಟೇ ಕೆಎಸ್.ಆರ್.ಟಿ.ಸಿ ಬಸ್ ಸೌಕರ್ಯವಿದ್ದರೂ ಬಸ್‌ನ ಡೋರ್‌ಗಳಲ್ಲಿ ನಿಂತು ಪ್ರಯಾಣಿಸುವ ದೌರ್ಭಾಗ್ಯ ತಪ್ಪಿಲ್ಲ

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ : ಬೆಂಗಳೂರಿಗೆ ಎಷ್ಟೇ ಕೆಎಸ್.ಆರ್.ಟಿ.ಸಿ ಬಸ್ ಸೌಕರ್ಯವಿದ್ದರೂ ಮಧುಗಿರಿ ಪ್ರಯಾಣಿಕರು ಮಾತ್ರ ಕೆ.ಎಸ್. ಆರ್.ಟಿ. ಸಿ ಬಸ್ ನ ಡೋರ್ ಗಳಲ್ಲಿ ನಿಂತು ಪ್ರಯಾಣಿಸುವ ದೌರ್ಭಾಗ್ಯ ತಪ್ಪಿಲ್ಲ.

ಹೌದು...ಮಧುಗಿರಿಯಿಂದ ಬೆಂಗಳೂರಿಗೆ ಪಯಣಿಸುವ ಬಹಳಷ್ಟು ಮಧುಗಿರಿ ಪ್ರಯಾಣಿಕರಿಗೆ ಇಂದಿಗೂ ಕೆಎಸ್.ಆರ್.ಟಿ.ಸಿ ಬಸ್ ನಲ್ಲಿ ಸೀಟು ಪಡೆದು ಸಂಚರಿಸುವ ಭಾಗ್ಯ ಇಲ್ಲವೆಂದೇ ಹೇಳಬಹುದು. ಮಧುಗಿರಿ ಮತ್ತು ಗಡಿ ಭಾಗದ ಪಾವಗಡದ ಬಹಳಷ್ಟು ಯುವ ಜನತೆ ಕೆಲಸ ಅರಸಿ ಬೆಂಗಳೂರಿಗೆ ಗುಳೆ ಹೋಗಿದ್ದು, ವಾರಾಂತ್ಯದಲ್ಲಿ ಕುಟುಂಬದವರೊಂದಿಗೆ ಕಳೆಯಲು ಮಧುಗಿರಿ ಮತ್ತು ಪಾವಗಡಕ್ಕೆ ಬರುವುದು ಸಾಮಾನ್ಯ. ನಂತರ ಸೋಮವಾರ ಬೆಳ್ಳಂಬೆಳಗ್ಗೆ ಕೆಲಸಕ್ಕೆ ಹೊರಡಲು ಕೆ.ಎಸ್.ಆರ್.ಟಿ.ಸಿ ಬಸ್ ಗಳನ್ನು ಅವಲಂಭಿಸಿದ್ದು, ಮಧುಗಿರಿಯಿಂದ ಬೆಂಗಳೂರಿಗೆ ಬರುವ ಬಹುತೇಕ ಬಸ್ ಗಳು ಪಾವಗಡದಿಂದಲೇ ಭರ್ತಿಯಾಗಿರುತ್ತವೆ. ಆದರೆ ಹೊಟ್ಟೆಪಾಡು ಕೇಳಬೇಕಲ್ಲ ಕೆಲಸಕ್ಕೆ ಹೋಗಲು ಬೆಳ್ಳಂಬೆಳಗ್ಗೆ ಬಸ್ ಹಿಡಿಯಲೇ ಬೇಕು. ರಶುಗಿಶು ಕೇಳಂಗಿಲ್ಲ... ಬಸ್ ಗಳು ಎಷ್ಟೇ ರಶ್ ಇದ್ದರೂ ವಿಧಿಯಿಲ್ಲದೇ ಬಸ್ ಏರಲೇಬೇಕು. ಇಲ್ಲದಿದ್ದರೆ ಹೊಟ್ಟೆಪಾಡು ಕೇಳಬೇಕಲ್ಲ...! ಇದರಿಂದಾಗಿ ಮಧುಗಿರಿಯ ಬಹಳಷ್ಟು ಪ್ರಯಾಣಿಕರಿಗೆ ಸೀಟು ಪಡೆದು ಪ್ರಯಾಣಿಸುವುದು ಕನಸಿನ ಮಾತೇ ಸರಿ. ಬಸ್ ನಲ್ಲಿ ಜನಸಂದಣಿ ಹೆಚ್ಚಿದ್ದರೂ ಕೆ.ಎಸ್.ಆರ್.ಟಿ.ಸಿ ಬಸ್ ಗಳ ಬಾಗಿಲಿನ ಬಳಿ ಜೀವ'ವನ್ನು ಕೈಯಲ್ಲಿ ಹಿಡಿದುಕೊಂಡು ನಿಂತುಕೊಂಡೇ ಪ್ರಯಾಣಿಸಬೇಕಾದ ಅನಿವಾರ್ಯತೆ ನಿರ್ಮಾಣವಾಗಿರುವುದು ಮಾತ್ರ ವಿಪರ್ಯಾಸ. ಇದು ಕೇವಲ ವಾರಾಂತ್ಯಕ್ಕೆ ಮಾತ್ರ




ಸೀಮಿತವಾಗಿಲ್ಲ. ಪ್ರತೀ ದಿನ ಇದೇ ಗೋಳು ತಪ್ಪಿದ್ದಲ್ಲ ಎನ್ನುತ್ತಾರೆ ಬೆಂಗಳೂರಿಗೆ ತೆರಳುವ ಉದ್ಯೋಗಿಗಳು.

ಇಂತಹ ಸಂದರ್ಭದಲ್ಲಿ ಬಸ್‌ನ ಬಾಗಿಲಿನಲ್ಲಿ ನಿಂತು ಪಯಣಿಸುವವರು ಆಯತಪ್ಪಿ ಕೆಳಗೆ ಬಿದ್ದು ಪ್ರಾಣ ಕಳೆದುಕೊಂಡರೆ ಇದಕ್ಕೆ ಯಾರು ಹೊಣೆ ಎಂಬುದು ಸಾರ್ವಜನಿಕರು ಪ್ರಶ್ನೆಯಾಗಿದೆ. ಇನ್ನು ಪಾವಗಡದಿಂದ ಬೆಂಗಳೂರಿಗೆ ಪ್ರತೀ ಅರ್ಧ ಗಂಟೆಗೊಂದು ಕೆ.ಎಸ್.ಆರ್.ಟಿ.ಸಿ ಬಸ್ ಸಂಚರಿಸಲಿದ್ದು, ಬಹಳಷ್ಟು ಬಸ್ ಗಳು ಪಾವಗಡದಲ್ಲೇ ಭರ್ತಿಯಾಗಿರುತ್ತವೆ. ಇನ್ನು ಮಧುಗಿರಿಯಿಂದ ಬೆಂಗಳೂರಿಗೆ 13 ಬಸ್ ಗಳು ಸಂಚರಿಸಲಿದ್ದು, ಬೆಳಗ್ಗೆ 5 ಗಂಟೆಯಿಂದ 10 ಗಂಟೆಯವರೆಗೆ 5 ಬಸ್ ಗಳು ಸಂಚರಿಸಲಿವೆ ಎಂದು ಕೆ.ಎಸ್. ಆರ್.ಟಿ. ಸಿ ಸಿಬ್ಬಂದಿ ಮಾಹಿತಿ ನೀಡುತ್ತಾರಾದರೂ ಬಹಳಷ್ಟು ಸಂದರ್ಭದಲ್ಲಿ ಬೆಳಗಿನ ವೇಳೆಯಲ್ಲಿ ಸಂಚರಿಸುವ ಬಸ್ ಗಳು ಆಪರೇಟ್ ಆಗುವುದೇ ಇಲ್ಲ. ಪ್ರಯಾಣಿಕರ ಅಗತ್ಯಕ್ಕೆ ತಕ್ಕಂತೆ ಬಸ್ ಗಳನ್ನು ಬಿಡುವುದಕ್ಕೆ ಇವರಿಗೆ ಇರುವ ತೊಂದರೆಯಾದರೂ ಏನು...? ಬೆಳಗಿನ ಜಾವ ಬಸ್ ಗಳಲ್ಲಿ ಸೀಟು ಸಿಗದೇ ಜನಸಂದಣಿಯಲ್ಲಿ ಬಸ್ ಏರಿ ಬೆಂಗಳೂರಿನ ಟ್ರಾಫಿಕ್ ಸಮಸ್ಯೆ ಎದುರಿಸಿಕೊಂಡು ಬಸ್ ಮೆಜೆಸ್ಟಿಕ್ ತಲುಪಲು ಕನಿಷ್ಠವೆಂದರೂ 5 ಗಂಟೆ ಕಾಲಾವಕಾಶ ಬೇಕು. ಇಂತಹ ಜನಸಂದಣಿ ಇರುವ ಬಸ್ ಗಳಲ್ಲಿ ಮಹಿಳಾ ಪ್ರಯಾಣಿಕರು ಅನುಭವಿಸುವ ಪಾಡು ದೇವರಿಗೇ ಗೊತ್ತು.

ಈಗ ಮಧುಗಿರಿಗೆ ವಿಭಾಗೀಯ ಕಚೇರಿ ಮಂಜೂರಾಗಿದ್ದು, ಮುಂದಿನ ದಿನಗಳಲ್ಲಾದರೂ ಕೆ.ಎಸ್.ಆರ್.ಟಿ.ಸಿ ಬಸ್ ಗಳ ಸಂಖ್ಯೆ ಹೆಚ್ಚಳ'ಗೊಂಡು ಮಧುಗಿರಿಯ ಪ್ರಯಾಣಿಕರಿಗೆ ಸುಲಭವಾಗಿ ಸೀಟುಗಳು ಲಭ್ಯವಾಗಲಿವೆಯೇ ಎಂಬುದನ್ನು ಕಾದು ನೋಡಬೇಕಿದೆ. ಶಕ್ತಿ ಯೋಜನೆಯಿಂದಾಗಿ ಮಹಿಳಾ ಪ್ರಯಾಣಿಕರ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದು, ಇದರಿಂದ ಪಾವಗಡ–ಬೆಂಗಳೂರಿಗೆ ಪಯಣಿಸುವ ಪ್ರಯಾಣಿಕರ ಸಂಖ್ಯೆಯಲ್ಲಿ ಹೆಚ್ಚಳವಾಗಿದ್ದು, ಇದರಿಂದ ಬೆಂಗಳೂರಿಗೆ ತೆರಳುವ ಬಸ್ ಗಳಲ್ಲಿ ಜನಸಂದಣಿ ಹೆಚ್ಚಾಗಿದೆ. ಇನ್ನು ಹೆಚ್ಚುವರಿ ಬಸ್ ಗಳನ್ನು ಬಿಡಲು ಬಸ್ ಮತ್ತು ಸಿಬ್ಬಂದಿ ಕೊರತೆ ಇದೆ. ಈಗ ಮಧುಗಿರಿಗೆ ವಿಭಾಗೀಯ ಕಚೇರಿ ಮಂಜೂರಾಗಿದ್ದು, ಮುಂದಿನ ದಿನಗಳಲ್ಲಿ ಸಮಸ್ಯೆ ಬಗೆ ಹರಿಯಲಿದೆ. ಕಾಂತರಾಜು, ವ್ಯವಸ್ಥಾಪಕರು, ಕೆ.ಎಸ್.ಆರ್.ಟಿ.ಸಿ ಮಧುಗಿರಿ ಡಿಪೋ.

## ಸಣ್ ಸುದ್ದಿ

# ಮೇ 3ರಂದು ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ನಗರ ಉಪವಿಭಾಗ 1ರ ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ಕೈಗೊಂಡಿರುವುದರಿಂದ ಮೇ 3ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಬುಗುಡನಹಳ್ಳಿ, ಶ್ರೀದೇವಿ ಕಾಲೇಜು, ವೆಂಕಟೇಶ್ವರ ರೈಸ್ ಮಿಲ್, ಮಲ್ಲೇನಹಳ್ಳಿಯಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ನಾಗರಾಜು ಹೆಚ್.ಪಿ. ಅವರು ಮನವಿ ಮಾಡಿದ್ದಾರೆ.

### ವ್ಯಕ್ತಿ ನಾಪತ್ತೆ

ತುಮಕೂರು: ಕಳ್ಳಂಬೆಳ್ಳ ಪೊಲೀಸ್ ಠಾಣೆ ವ್ಯಾಪ್ತಿಯ ಶಿರಾ ತಾಲ್ಲೂಕು ನಿಜ್ಜಯ್ಯನಪಾಳ್ಯದ ಸುಮಾರು 37 ರ್ಷದ ವಿಶ್ವನಾಥ ಎಂಬ ವ್ಯಕ್ತಿಯು 2026ರ ಮಾರ್ಚ್ 11ರಂದು ಕಾಣೆಯಾಗಿದ್ದಾನೆ ಎಂದು ಈತನ ಪತ್ನಿ ತೇಜಸ್ವಿನಿ ಠಾಣೆಗೆ ದೂರು ನೀಡಿದ್ದಾರೆ.

ಈತನು ತನ್ನ ಮೋಟಾರ್ ಸೈಕಲ್ ಅನ್ನು ಕರೆಜ್ಜೀವನಹಳ್ಳಿ ಟೋಲ್ ಬಳಿ ಬಿಟ್ಟು ಹೋಗಿರುತ್ತಾನೆ. ಮೋಟಾರ್ ಸೈಕಲ್‌ನಲ್ಲಿ ಕೀಪ್ಯಾಡ್ ಮೊಬೈಲ್ ಹಾಗೂ ಕೀಗಳು ಇರುವುದಾಗಿ ದೂರಿನಲ್ಲಿ ತಿಳಿಸಿದ್ದಾರೆ. ಈತನು 5.7 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ತೆಳ್ಳನೆಯ ಶರೀರ, ದುಂಡು ಮುಖ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾನೆ.

ಕಾಣೆಂಯಾದವನ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ವಾ.ಸಂ. 08135–274738/ 275257/ 275184, 0816–2278000, ಮೊ.ಸಂ. 948080 2955–34–00ಯನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

# ಹಳೆಯ ವಿದ್ಯಾರ್ಥಿಗಳ ಸಮಾಗಮ

ತುಮಕೂರು: ಶ್ರೀ ಸಿದ್ಧಾರ್ಥ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ (SSIMS) ತನ್ನ ಹಳೆಯ ವಿದ್ಯಾರ್ಥಿಗಳ ಸಮಾಗಮ ಕಾರ್ಯಕ್ರಮವಾದ "ನೆನಪು" ವನ್ನು ಆಯೋಜಿಸುತ್ತಿದೆ. ಈ ಕಾರ್ಯಕ್ರಮವು ಇಂದು ಬೆಳಿಗ್ಗೆ–10.30 ಗಂಟೆಗೆ ಸೆಮಿನಾರ್ ಹಾಲ್ ನಲ್ಲಿ ನಡೆಯಲಿದೆ.

ಈ ಸಂಭ್ರಮದ ಕಾರ್ಯಕ್ರಮಕ್ಕೆ ಗೃಹ ಸಚಿವರು , ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ನ (ಖಖಂಊಇ) ಕುಲಾಧಿಪತಿಗಳಾದ ಸವ್ಯಸಾಚಿ ಡಾ. ಜಿ. ಪರಮೇಶ್ವರ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಬೆಂಗಳೂರಿನ ರೋಟರಿ ಡಿಸ್ಟ್ರಿಕ್ಟ್ 3191 ರ ಐಟಿ ನಿರ್ದೇಶಕರಾದ ಶ್ರೀ ರಘು ಬನ್ನೂರ್ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಖಖಂಊಇಂಯ ಉಪಕುಲಪತಿಗಳಾದ ಡಾ. ಕೆ. ಬಿ. ಲಿಂಗೇಗೌಡ ಹಳೆಯ ವಿಧ್ಯಾರ್ಥಿನಿಯಾದ ಕುಮಾರಿ ಇಂಚರ, ಒಬೇದುಲ್ಲಾ ಷರೀಫ್ ಇವರುಗಳು ಆಗಮಿಸಲಿದ್ದಾರೆ.SSIMS ನ ಪ್ರಾಂಶುಪಾಲರಾದ ಡಾ. ಬಿ. ಅಜ್ಮತುಲ್ಲಾ ಅವರು ಈ ಕಾರ್ಯಕ್ರಮದ ನೇತೃತ್ವ ಮತ್ತು ಪವಿತ್ರ ಓ (Associte Professor, SSIMS) ಇವರು ಮುಂದಾಳತ್ವವನ್ನು ವಹಿಸಿದ್ದಾರೆ. ಈ ಸಮಾಗಮದಲ್ಲಿ ಖಖಖಒಖ ನ 27ನೇ ಬ್ಯಾಚ್ನ ಹಳೆಯ ವಿದ್ಯಾರ್ಥಿಗಳು, ಹಾಲಿ ವಿದ್ಯಾರ್ಥಿಗಳು ಮತ್ತು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಭಾಗವಹಿಸಲಿದ್ದಾರೆ.

# ಜೆಡಿಯು ಸದಸ್ಯತ್ವ ಅಭಿಯಾನಕ್ಕೆ ಚಾಲನೆ

ಸೂರ್ಯಪ್ರಗತಿನ್ಯೂಸ್.ಕಾಂ



ಜೆಡಿಯ ು ಕೇಂದ್ರ ಕಚೇರಿಯಲ್ಲಿ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ನಡೆಯಿತು. ಪಕ್ಷದ ' ರಾಜ್ಯಾಧ್ಯಕ್ಷ ಮಹಿಮಾ ಪಟೇಲ್ ಅವರ ನೇತೃತ್ವದಲ್ಲಿ ನಡೆದ ಹಲವಾರು ಮಂದಿ ಸದಸ್ಯತ್ವ ಪಡೆದು ಕೊಂಡ ರು, ನೋಂದಣಿ ಕಾರ್ಯಕ್ರಮದಲ್ಲಿ ಯುವ ಘಟಕದ ರಾಜ್ಯಾಧ್ಯಕ್ಷ ಡಾ. ನಾಗರಾಜ್, ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ಗಂಗೂರು, ಕೆ.ಆರ್. ರಂಗನಾಥ್, ಲಕ್ಷ್ಮೀ, ಉಪಾಧ್ಯಕ್ಷೆ ಶಾಂತ ಕುಮಾರಿ, ಮಹಿಳಾ ಘಟಕದ ಅಧ್ಯಕ್ಷೆ ಕಲಾವತಿ, ರೈತ ಘಟಕದ' ಅಧ್ಯಕ್ಷ ಶ್ರೀನಿವಾಸಗೌಡ, ವಕ್ತಾರ ರಮೇಶ್ ಗೌಡ, ಯುವ ಘಟಕದ ರಾಜ್ಯ ಕಾರ್ಯಧ್ಯಕ್ಷ ಪ್ರಭು ಡಿ.ಜೆ, ಕಾರ್ಯದರ್ಶಿ ಪ್ರಕಾಶ್ ಮಾಡಿಕ್, ಮುಖಂಡರಾದ ಶಿವರಾವ್, ಎಂಎಲ್‌ಸಿ ಅಭ್ಯರ್ಥಿ ಶಂಕರ್ ರೆಡ್ಡಿ ಪಾಟೀಲ್, ನೆಲಮಂಗಲ ರಾಮಯ್ಯ, ಕೋಲಾರ ಯುವ ಜನತಾ ದಳ ಜಿಲ್ಲಾಧ್ಯಕ್ಷ ನಾರಾಯಣ ಸ್ವಾಮಿ ಗೌಡ, ಗದ್ದಿಗೌಡ್ರು, ಜಾವೀದ್ ಇದ್ದರು.



**ಮಧುಗಿರಿ ತಾಲೂಕಿಗೆ ದೇವಮೂಲೆಯಲ್ಲಿರುವ ಇತಿಹಾಸ ಪ್ರಸಿದ್ಧ ಹಾಗೂ ಪುರಾತನ ಚಿಕ್ಕದಾಳವಾಟ ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ದೇವರಿಗೆ ಗುರುವಾರದಂದು ನರಸಿಂಹ ಜಯಂತಿ ಅಂಗವಾಗಿ ವಿಶೇಷ ಅಭಿಷೇಕ ಪೂಜೆ ಹಾಗೂ ಅಲಂಕಾರ ನಡೆಯಿತು.**

# ವಿಶ್ವ ಕಾರ್ಮಿಕ ದಿನಾಚರಣೆ 2026 ಮೇ ಡೇ ಆಚರಣೆ

**ಸೆಂಟರ್ ಅಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ ತುಮಕೂರು ಜಿಲ್ಲಾ ಸಮಿತಿ 2026 ತುಮಕೂರು ನಗರದ, ಟೌನ್ ಹಾಲ್ ವೃತ್ತದ, ಮಹಾನಗರ ಪಾಲಿಕೆಯ ಅವರಣದಲ್ಲಿ ವಿಶ್ವ ಕಾರ್ಮಿಕ ದಿನಾಚರ'ಣೆಯನ್ನು ಆಯೋಜಿಸಿದ್ದ, ಈ ಕಾರ್ಯಕ್ರಮವನ್ನು ಪ್ರಗತಿ ಪರಚಿಂತಕರು, ಮಾಜಿ ರಾಜ್ಯ ಸಭಾ ಸದಸ್ಯರಾದ ಡಾ.ಎಲ್ ಹನುಮಂತಯ್ಯ ನವರು ಉದ್ಘಾಟಿಸಲಿದ್ದು, ಮೇ ಡೇ ಕ್ರೀಡಾ ಕೂಟದ ಲ್ಲಿ ಗೆದ್ದಂತ ಕ್ರೀಡಾಪಟುಗಳಿಗೆ ಬಹುಮಾನವನ್ನು ವಿತರಿಸಲಾಗುವುದು, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9844532269, 8310424751**

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.